# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ಸಾಗರವ ದಾಟಲು ದೋಣಿ ಬೇಕು
ಆ ದೋಣಿಯ ಸಾಗಿಸಲು ನಾವಿಕ ಬೇಕು..
ಮೋಡವ ಸರಿಸಲು ಸೂರ್ಯ ಬೇಕು
ಆ ಸೂರ್ಯನ ಕಿರಣಗಳು ಪಸರಿಸಲೇಬೇಕು
ಲೋಕ ಉಳಿಯಲು ಪ್ರಕೃತಿ ಬೇಕು
ಆ ಪ್ರಕೃತಿಯ ಉಳಿಸಲು ಎಲ್ಲರು ಪ್ರಯತ್ನಿಸಬೇಕು..
ಉಪಕಾರ ಮಾಡಲು ಮನಸ್ಸು ಬೇಕು
ಆ ಮನಸ್ಸನ್ನು ಶುದ್ಧೀಕರಿಸಲು ಮಾನವನಾಗಬೇಕು..
ಮಾನವನಾಗಲು ಭಗವಂತನ ಕೃಪೆ ಬೇಕು
ಆ ಭಗವಂತನ ಒಲಿಸಲು ನಾಮಸ್ಮರಣೆ ಮಾಡಬೇಕು..

**ಭಗವಾನ್ ಶ್ರೀಕೃಷ್ಣ**



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 18-04-2025 to 24-04-2025 ಬೆಲೆ: 7-00 ಸಂಪುಟ–4 ಸಂಚಿಕೆ–43 ಪುಟಗಳು–6









ಇತ್ತೀಚಿನ ದಿನಗಳಲ್ಲಿ ಕಡಲ ಕಿನಾರೆಯಲ್ಲಿ ಆಟವಾಡಲು ಹೋಗಿ ಪ್ರಾಣ ಕಳೆದುಕೊಳ್ಳುವವರ ಸಂಖ್ಯೆ ಹೆಚ್ಚಾಗುತ್ತಿದೆ. ಸಮುದ್ರದ ಭಯಾನಕತೆ ಗೊತ್ತಿದ್ದರೂ ಹುಚ್ಚು ಸಹಾಸಕ್ಕೆ ಇಳಿಯುವ ಯುವಕ ಯುವತಿಯರು ತಾನು ಮಾತ್ರವಲ್ಲದೆ ತನ್ನ ಜೊತೆಗಾರರಿಗೂ ಅಪಾಯ ತಂದಿಕ್ಕುತ್ತಿದ್ದಾರೆ. ಹೀಗಿರುವಾಗ ಸಮುದ್ರದ ಕಿನಾರೆಯಲ್ಲಿ ಆಟವಾಡುವಾಗ ಎಲ್ಲರೂ ಎಚ್ಚರಿಕೆಯಿಂದ ಇರುವುದು ಉತ್ತಮ

## ಬಿಜೆಪಿಗೆ ಸೇರಿದರೆ ವಾಷಿಂಗ್ ಮಿಷಿನ್‌ಗೆ ಹಾಕಿದಂತೆ ಸ್ವಚ್ಛ: ರೈ



**ಮಂಗಳೂರು:** ಕೇಂದ್ರದ ಬಿಜೆಪಿ ಸರ್ಕಾರ ಜಾರಿ ನಿರ್ದೇಶನಾಲಯದ ಮೂಲಕ ದಬ್ಬಾಳಿಕೆ ನಡೆಸಲು ಹೊರಟಿದೆ. ಅದಕ್ಕೆ ಕಾಂಗ್ರೆಸ್ ದೇಶವ್ಯಾಪಿ ಹೋರಾಟ ಮಾಡುವ ಮೂಲಕ ತಕ್ಕ ಉತ್ತರ ಕೊಟ್ಟಿದ್ದೇವೆ. ಈ ಹಿಂದೆಯೂ ಇಡಿ ಮೂಲಕ ದಾಳಿ ಮಾಡಿಸಿ ಬಿಜೆಪಿಯೇತರ ನಾಯಕರನ್ನು ಹೆದರಿಸುವ ಕೆಲಸ ಮಾಡಿತ್ತು. ಯಾರು ಇಡಿ ಮೇಲೆ ಭಯಪಟ್ಟು ಬಿಜೆಪಿ ಸೇರಿದ್ದಾರೋ ಅವರ ಮೇಲಿನ ಎಲ್ಲ ಕೇಸ್‌ಗಳನ್ನು ಮುಚ್ಚಿ ಹಾಕಲಾಗಿದೆ. ಇಡಿ ದಾಳಿಯ ಭೀತಿಯಿಂದ ಬಿಜೆಪಿ ಸೇರಿದವರು ವಾಷಿಂಗ್ ಮಿಷಿನ್‌ಗೆ **3ನೇ ಪುಟಕ್ಕೆ**


## ಕ್ರಿಮಿನಲ್ ಮೊಕದ್ದಮೆ ಎಚ್ಚರಿಕೆ?

**ಮಂಗಳೂರು:** ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳು ಮತ್ತು ಪರಿಶಿಷ್ಟ ಬುಡಕಟ್ಟುಗಳ ಜನರ ಸಾಂವಿಧಾನಿಕ ಹಕ್ಕುಗಳನ್ನು ಕಿತ್ತುಕೊಳ್ಳಲು ಕಾಂತರಾಜ್ ನೇತೃತ್ವದ ಹಿಂದುಳಿದ ವರ್ಗಗಳ ಆಯೋಗ ವ್ಯವಸ್ಥಿತ ಸಂಚು ನಡೆಸಿದೆ ಎಂದು ಪರಿಶಿಷ್ಟ ಜಾತಿಗಳು ಮತ್ತು ಬುಡಕಟ್ಟುಗಳ ಸಂಘ ಸಂಸ್ಥೆಗಳ ಮಹಾ ಒಕ್ಕೂಟದ ಅಧ್ಯಕ್ಷ ಲೋಲಾಕ್ಷ ಆರೋಪಿಸಿದ್ದಾರೆ. ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ 180 ಪರಿಶಿಷ್ಟ ಜಾತಿಗಳು ಮತ್ತು 105 ಪರಿಶಿಷ್ಟ ಬುಡಕಟ್ಟುಗಳು ಇವೆ ಎಂಬುದು ಕಾಂತರಾಜ್ ಆಯೋಗ ನಡೆಸಿದ ಜಾತಿ **3ನೇ ಪುಟಕ್ಕೆ**




## ಸರ್ಕಾರ ಕೆಡವುವ ಯತ್ನ ನಡೆದಿದೆ –ಖರ್ಗೆ

**ಕಲಬುರಗಿ:** ಕರ್ನಾಟಕದಲ್ಲೂ ಕಾಂಗ್ರೆಸ್ ಸರ್ಕಾರ ಕೆಡವುವ ಪ್ರಯತ್ನ ನಡೆಯುತ್ತಿದೆ. ನಿಮ್ಮಲ್ಲಿ ಏನೇ ಭೇದಭಾವ ಇದ್ದರೂ ಒಂದಾಗಿ ಇರಬೇಕು. ಇಲ್ಲದಿದ್ದರೆ ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ ಅವರು ಬಡ ಜನರನ್ನು ನುಂಗುತ್ತಾರೆ ಎಂದು ಎಐಸಿಸಿ ಅಧ್ಯಕ್ಷರೂ ಹಾಗೂ ರಾಜ್ಯ ಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಕಾಂಗ್ರೆಸ್ ನಾಯಕರಿಗೆ ಕಿವಿಮಾತು ಹೇಳಿದ್ದಾರೆ. ಕೌಶಲಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ಹಮ್ಮಿಕೊಂಡಿದ್ದ ಕಲಬುರಗಿ ವಿಭಾಗ ಮಟ್ಟದ ಉದ್ಯೋಗ ಮೇಳದಲ್ಲಿ ಅವರು **3ನೇ ಪುಟಕ್ಕೆ**









## ಆಯೋಗದ ವಿರುದ್ಧ ಕ್ರಿಮಿನಲ್ ಮೊಕದ್ದಮೆಯ ಎಚ್ಚರಿಕೆ

ಒಂದನೇ ಪುಟದಿಂದ......

ಸಮೀಕ್ಷೆಯಲ್ಲಿ ಪತ್ತೆಯಾಗಿವೆ ಎಂದು ಪತ್ರಿಕಾ ವರದಿಯಾಗಿದೆ. ಆದರೆ ಕರ್ನಾಟದಲ್ಲಿ 101 ಪರಿಶಿಷ್ಟ ಜಾತಿಗಳು ಎಂದು ಅಧಿಸೂಚಿಸಲ್ಪಟ್ಟಿವೆ. ಜಾತಿಗಳನ್ನು ಪತ್ತೆ ಮಾಡುವ ಅಧಿಕಾರ ಆಯೋಗಕ್ಕೆ ಇಲ್ಲ. ಜಾತಿಗಳನ್ನು ಅಧಿಸೂಚನೆಗೊಳಿಸುವ ಅಧಿಕಾರ ರಾಷ್ಟ್ರಪತಿಗೆ ಮಾತ್ರ ಇರುವುದು. ಹಾಗಾಗಿ ಪರಿಶಿಷ್ಟ ಜಾತಿಗಳ ಪಟ್ಟಿಯಲ್ಲಿ ಇಲ್ಲದ ಯಾವುದೇ ಜಾತಿಯೂ ಪರಿಶಿಷ್ಟ ಜಾತಿಯಾಗುವುದಿಲ್ಲ. ಈ ರೀತಿಜಾತಿ ಪರಿಗಣಿಸುವುದು ಸಂವಿಧಾನದ ಮೇಲಿನ ದಾಳಿಯಾಗಿದೆ. ರಾಜ್ಯದಲ್ಲಿ ಹಿಂದುಳಿದ ಅಥವಾ ಅತೀ ಹಿಂದುಳಿದ ಕೆಲವು ಜಾತಿಗಳು ಅಕ್ರಮದಾರಿ ಮೂಲಕ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡದ ಜಾತಿ ಸರ್ಟಿಫಿಕೇಟ್ ಪಡೆಯುವ ನಿಟ್ಟಿನಲ್ಲಿ ಆಯೋಗದ ಈ ನಡೆ ಸಂವಿಧಾನ ವಿರೋಧಿ ಹಾಗೂ ದಲಿತ ವಿರೋಧಿ ಷಡ್ಯಂತ್ರ ಎಂದವರು ಹೇಳಿದರು. ಪರಿಶಿಷ್ಟ ಬುಡಕಟ್ಟುಗಳಿಗೆ ಸಂಬಂಧಿಸಿ ಸಂವಿಧಾನದ ವಿಧಿ 342(1) ಮತ್ತು 342(2) ರಲ್ಲಿ ಇದೇ ರೀತಿಯ ನಿಯಮಗಳನ್ನು ಪ್ರಸ್ತಾವಿಸಲಾಗಿದೆ. ಪ್ರಸಕ್ತರಾಜ್ಯದಲ್ಲಿ ಪರಿಶಿಷ್ಟ ಬುಡಕಟ್ಟುಗಳ ಪಟ್ಟಿಯಲ್ಲಿ 49 ಜಾತಿಗಳು ಅಧಿಸೂಚನೆಗೊಂಡಿವೆ. ಕಾಂತರಾಜ್‌ಆಯೋಗವುರಾಜ್ಯದಲ್ಲಿ 105 ಪರಿಶಿಷ್ಟ ಬುಡಕಟ್ಟುಗಳನ್ನು ಪತ್ತೆ ಮಾಡಿದೆ ಎಂಬುದು ಪರಿಶಿಷ್ಟ ಬುಡಕಟ್ಟುಗಳ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ. ಇದು ನೈಜ ಬುಡಕಟ್ಟುಗಳಿಂದ ಅವರ ಸಾಂವಿಧಾನಿಕ ಹಕ್ಕುಗಳನ್ನು ಕಿತ್ತುಕೊಳ್ಳುವ ವ್ಯವಸ್ಥಿತ ಭಾಗ. ಈ ವಿಷಯದಲ್ಲಿ ಅಗತ್ಯ ಬಿದ್ದರೆ ಆಯೋಗದ ಅಧ್ಯಕ್ಷರು ಹಾಗೂ ಕಾರ್ಯದರ್ಶಿ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವ ಬಗ್ಗೆ ಪರಿಶೀಲಿಸಲಾಗುವುದು ಎಂದರು.

## ಬಿಜೆಪಿಗೆ ಸೇರಿದರೆ ವಾಷಿಂಗ್ ಮಿಷಿನ್‌ಗೆ ಹಾಕಿದಂತೆ ಸ್ವಚ್ಛ–ರೈ

ಒಂದನೇ ಪುಟದಿಂದ......

ಹಾಕಿದಂತೆ ಸ್ವಚ್ಛ ಆಗುತ್ತಾರೆ ಎಂದು ಮಾಜಿ ಸಚಿವ ರಮಾನಾಥರೈ ಲೇವಡಿ ಮಾಡಿದ್ದಾರೆ. ನ್ಯಾಶನಲ್ ಹೆರಾಲ್ಡ್ ಪ್ರಕರಣದಲ್ಲಿ ಕಾಂಗ್ರೆಸ್ ರಾಷ್ಟ್ರೀಯ ನಾಯಕರಾದ ಸೋನಿಯಾಗಾಂಧಿ, ರಾಹುಲ್‌ಗಾಂಧಿ ಮತ್ತಿತರ ನಾಯಕರ ವಿರುದ್ಧ ಇಡಿ ಸುಳ್ಳು ಆರೋಪ ಹೊರಿಸಿ ದೋಷಾರೋಪ ಪಟ್ಟಿ ಸಲ್ಲಿಸಿದೆ ಎಂದು ಆರೋಪಿಸಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಮಂಗಳೂರಿನ ಜಾರಿ ನಿರ್ದೇಶನಾಲಯ ಕಚೇರಿ ಎದುರು ಪ್ರತಿಭಟನೆ ನಡೆಸಿದ ಸಂದರ್ಭ ಮಾತನಾಡಿ ಕೇಂದ್ರ ಸರ್ಕಾರ ಇಡಿ ಎದುರಿಗಿಟ್ಟು ರಾಜಕೀಯ ನಡೆಸುತ್ತಿದೆ. ಸೋನಿಯಾಗಾಂಧಿ ಮತ್ತು ರಾಹುಲ್‌ಗಾಂಧಿ ಅವರ ಮೇಲೆ ಸುಳ್ಳು ದೋಷಾರೋಪ ಪಟ್ಟಿ ಸಲ್ಲಿಸಿರುವುದು ಸಂಪೂರ್ಣ ರಾಜಕೀಯ ಪ್ರೇರಿತ. ಇದರ ವಿರುದ್ಧ ನಾವು ಬೀದಿಗಿಳಿದು ಹೋರಾಟ ನಡೆಸಲಿದ್ದೇವೆ. ಅಗತ್ಯ ಬಿದ್ದರೆ ಪ್ರಾಣಕೊಡಲೂ ಸಿದ್ಧ ಎಂದು ರಮಾನಾಥರೈ ಗುಡುಗಿದರು.

## ಸರ್ಕಾರ ಕೆಡವುವ ಯತ್ನ ನಡೆದಿದೆ–ಖರ್ಗೆ

ಒಂದನೇ ಪುಟದಿಂದ......

ಮಾತನಾಡಿ, ದೇಶದಲ್ಲಿ ಎಲ್ಲೆಲ್ಲಿ ಕಾಂಗ್ರೆಸ್ ಸರ್ಕಾರ ಇದೆಯೋ ಅಲ್ಲಿ ಕೇಂದ್ರ ಸರ್ಕಾರ ಇ.ಡಿ, ಸಿಬಿಐ, ಸಿವಿಸಿ, ಐಟಿ ಸಂಸ್ಥೆಗಳನ್ನು ಬಳಸಿಕೊಂಡು ಕಾಂಗ್ರೆಸ್ ಸರ್ಕಾರವನ್ನು ಕೆಡವಿ, ತಮ್ಮ ಕೈಗೆ ಅಧಿಕಾರ ತೆಗೆದುಕೊಳ್ಳುವ ಪ್ರಯತ್ನ ಮಾಡುತ್ತಿದೆ. ಹೀಗಾಗಿ ನಮ್ಮ ನಾಯಕರು ಎಚ್ಚರಿಕೆಯಿಂದ ಇರಬೇಕು. ಬಡಜನರ ರಕ್ಷಣೆಗಾಗಿ ನಿಮಗೆ ಅಧಿಕಾರ ಕೊಟ್ಟಿದ್ದಾರೆ. ಅವರ ರಕ್ಷಣೆ ಮಾಡುವುದು ನಿಮ್ಮ ಕೈಯಲ್ಲಿದೆ. ಬಿಜೆಪಿಯವರಂತೂ ಲೂಟಿ, ಜಗಳ ಮಾಡಿಸಲು ನಿಂತಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ದೇಶದ ಸ್ವಾತಂತ್ರ್ಯಕ್ಕಾಗಿ ಜವಾಹರಲಾಲ್ ನೆಹರೂ ಅವರು ನ್ಯಾಷನಲ್ ಹೆರಾಲ್ಡ್ ಪತ್ರಿಕೆಯನ್ನು ಆರಂಭಿಸಿದ್ದರು. ದೇಶಕ್ಕಾಗಿ ಕೆಲಸ ಮಾಡಿದ ಸಂಸ್ಥೆಯ ಮೇಲೆ ಇ.ಡಿಯಿಂದ ದಾಳಿ ನಡೆಸಿ, ಸೋನಿಯಾಗಾಂಧಿ, ರಾಹುಲ್ ಗಾಂಧಿ ವಿರುದ್ಧ ಚಾರ್ಜ್‌ಶೀಟ್ ದಾಖಲಿಸಿರುವ ಇವರಿಗೆ ನಾಚಿಕೆಯಾಗಬೇಕು. ನಿಮ್ಮ ಗಂಟನ್ನು ಹೊಡೆದಿದ್ದಾರಾ? ನೀವೇನು ಚಂದಾ ಕೊಟ್ಟು ಈ ಪತ್ರಿಕೆಯನ್ನು ಮಾಡಿದ್ದೀರಾ ಎಂದು ಖರ್ಗೆ ಹರಿಹಾಯ್ದರು. ಇ.ಡಿ ಮೂಲಕ ಚಾರ್ಜ್‌ಶೀಟ್ ಹಾಕಿಸಿದರೆ ಕಾಂಗ್ರೆಸ್ ಬಗ್ಗುವುದಿಲ್ಲ. ಸೋನಿಯಾಗಾಂಧಿ, ರಾಹುಲ್ ಗಾಂಧಿ ಮಣಿಯುವುದಿಲ್ಲ. ನಾವು ದೇಶವನ್ನು ಕಟ್ಟುತ್ತೇವೆ. ಬಿಜೆಪಿ ಸರ್ಕಾರವನ್ನು ಒದ್ದು ಓಡಿಸುತ್ತೇವೆ ಎಂದು ಕೇಂದ್ರ ಸರ್ಕಾರದ ವಿರುದ್ಧ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ ನಡೆಸಿದರು.

## 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಂಗಳೂರು : ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ದ.ಕ ಜಿಲ್ಲೆಯಲ್ಲಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಶೈಕ್ಷಣಿಕ ವರ್ಷ 2025–26ನೇ ಸಾಲಿನಲ್ಲಿ 6ನೇ ತರಗತಿಗೆ ಉಚಿತ ಪ್ರವೇಶಕ್ಕಾಗಿ "ಸೇವಾ ಸಿಂಧು ಪೋರ್ಟಲ್" ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಇಂಗ್ಲೀಷ್ ಮೀಡಿಯಂ ರಾಜ್ಯ ಮಟ್ಟದ ಪಠ್ಯಕ್ರಮದಲ್ಲಿ ಶಿಕ್ಷಣ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಹಾಯವಾಣಿ ಸಂಖ್ಯೆ: 8277799990 ಅಥವಾ ಪಾಂಡೇಶ್ವರ ಓಲ್ಡ್ ಕೆಂಟ್ ರೋಡ್‌ನಲ್ಲಿರುವ ಇಲಾಖೆಯ ಕಚೇರಿಯನ್ನು ಸಂಪರ್ಕಿಸುವಂತೆ ಇಲಾಖಾ ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಶುಪಾಲನಾ ಕೇಂದ್ರ ಕಾರ್ಯಕರ್ತೆ– ಸಹಾಯಕಿ ಹುದ್ದೆಗೆ ಅರ್ಜಿ ಆಹ್ವಾನ

ಮಂಗಳೂರು – ದಕ್ಷಿಣ ಕನ್ನಡ ಜಿಲ್ಲಾ ಸ್ತ್ರೀಶಕ್ತಿ ಒಕ್ಕೂಟದಿಂದ ನಡೆಸಲ್ಪಡುತ್ತಿರುವ ವಾತ್ಸಲ್ಯ ಶಿಶುಪಾಲನಾ ಕೇಂದ್ರಕ್ಕೆ ಒಂದು ಕಾರ್ಯಕರ್ತೆ ಹಾಗೂ ಇಬ್ಬರು ಸಹಾಯಕಿ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗೆ ಜಿಲ್ಲಾ ಸ್ತ್ರೀಶಕ್ತಿ ಒಕ್ಕೂಟದ ಅಧ್ಯಕ್ಷರ ದೂರವಾಣಿ ಸಂಖ್ಯೆ – 63616 33162 ಸಂಪರ್ಕಿಸುವಂತೆ ಜಿಲ್ಲಾ ಸ್ತ್ರೀಶಕ್ತಿ ಒಕ್ಕೂಟದ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ನೀಡಲು ಅರ್ಜಿ ಆಹ್ವಾನ

ಶಿವಮೊಗ್ಗ : ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ಪ್ರಾರಂಭಿಕವಾಗಿ 26 ವರ್ಗಗಳ ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲಾಗುತ್ತಿದ್ದು, ಹೊಸದಾಗಿ ಹಿಂದುಳಿದ ವರ್ಗಗಳ ಪ್ರವರ್ಗ–1,2ಎ, ಮತ್ತು 3ಬಿಗೆ ಸೇರಿದ ಪಾರಂಪರಿಕ ವೃತ್ತಿಯಲ್ಲಿ ತೊಡಗಿರುವ 38 ವರ್ಗಗಳು ಹಾಗೂ ಹಿಂದುಳಿದ ವರ್ಗಗಳ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡದ ಕುಲಕಸುಬಿನಲ್ಲಿ ತೊಡಗಿರುವ 27 ವರ್ಗಗಳ ಕಾರ್ಮಿಕರು ಸೇರಿದಂತೆ ಒಟ್ಟಾರೆ 91 ವರ್ಗಗಳ ಕಾರ್ಮಿಕರನ್ನು ಉಚಿತವಾಗಿ ನೋಂದಾಯಿಸಿ ಸೌಲಭ್ಯಗಳನ್ನೊಳಗೊಂಡ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದ್ದು ಅರ್ಹರಿಂದ ಅರ್ಜಿ ಆಹ್ವಾನಿಸಿದೆ.

## ಅಗ್ನಿವೀರ್ ನೇಮಕಾತಿಗಾಗಿ ಆನ್‌ಲೈನ್ ಅರ್ಜಿ

ಶಿವಮೊಗ್ಗ : ಅಗ್ನಿಪಥ್ ಯೋಜನೆಯಡಿ 2025–26ನೇ ಸಾಲಿನ ಅಗ್ನಿವೀರ್ ನೇಮಕಾತಿ ಪರೀಕ್ಷೆಗೆ ಬಾಗಲಕೋಟೆ, ಗದಗ, ವಿಜಯಪುರ, ಧಾರವಾಡ, ಉತ್ತರ ಕನ್ನಡ, ಉಡುಪಿ, ದಾವಣಗೆರೆ, ಹಾವೇರಿ, ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳ ಅವಿವಾಹಿತ ಪುರುಷ ಅಭ್ಯರ್ಥಿಗಳಿಂದ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಆನ್‌ಲೈನ್ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ಏ. 25 ರವರೆಗೆ ವಿಸ್ತರಿಸಲಾಗಿದೆ ಎಂದು ಶಿವಮೊಗ್ಗ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ನೋಂದಣಿ ಪೋರ್ಟಲ್–WWW.JOININDIARMY.NIC.IN ಹಾಗೂ ಹೆಚ್ಚಿನ ಮಾಹಿತಿಗಾಗಿ ಮಂಗಳೂರು ಸೇನಾ ನೇಮಕಾತಿ ಕಛೇರಿ ದೂ.ಸಂ.–0824–2951279 ಹಾಗೂ ಇ-ಮೇಲ್: aromangalore2021@gmail.com ಸಂಪರ್ಕಿಸಬಹುದಾಗಿದೆ.

## ಅರ್ಹತಾ ಪರೀಕ್ಷೆಗೆ ಆನ್‌ಲೈನ್ ಅರ್ಜಿ ಆಹ್ವಾನ

ಶಿವಮೊಗ್ಗ : ಸಮಾಜ ಕಲ್ಯಾಣ ಇಲಾಖೆಯ 2025–26ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು ಪ್ರತಿಷ್ಠಿತ ಶಾಲೆಗಳಿಗೆ ಅರ್ಹತಾ ಪರೀಕ್ಷೆಯ ಮೂಲಕ 6ನೇ ತರಗತಿಗೆ 35 ಸ್ಥಾನಗಳಿಗೆ ದಾಖಲಿಸಿಕೊಳ್ಳಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಆಸಕ್ತರು ಅಂತರ್ಜಾಲ ತಾಣ https://swd.karnataka.gov.inರಲ್ಲಿ ಅರ್ಜಿ ಸಲ್ಲಿಸಿ, ಅರ್ಜಿ ಹಾಗೂ ದಾಖಲೆಗಳನ್ನು ಉಪನಿರ್ದೇಶಕರು ಹಾಗೂ ಎಲ್ಲಾ ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಮೇ 03ರೊಳಗಾಗಿ ಸಲ್ಲಿಸುವಂತೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ದೂ.ಸಂ: 08182–249241 ನ್ನು ಹಾಗೂ ಆಯಾ ತಾಲೂಕು ಕಚೇರಿಯ ಸಹಾಯಕ ನಿರ್ದೇಶಕರ ಕಚೇರಿಗಳನ್ನು ಸಂಪರ್ಕಿಸುವುದು.

## ಫೆಲೋಶಿಪ್‌ಗೆ ಅರ್ಜಿ ಆಹ್ವಾನ

ಮಡಿಕೇರಿ : ಸಂತಕವಿ ಕನಕದಾಸ ಅಧ್ಯಯನ ತತ್ವಪದಕಾರರ ಅಧ್ಯಯನ ಕೇಂದ್ರವು 2024–25 ನೇ ಸಾಲಿನಲ್ಲಿ ಕಿರು ಅಧ್ಯಯನ ನಡೆಸಲು ತಲಾ ರೂ.1.50 ಲಕ್ಷಗಳಂತೆ ಫೆಲೋಶಿಪ್ ನೀಡಲಾಗುವುದು. ಆಸಕ್ತಿಯುಳ್ಳ 20 ರಿಂದ 55 ವರ್ಷ ವಯಸ್ಸಿನ ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಅರ್ಜಿಯನ್ನು ಅಧ್ಯಯನ ಕೇಂದ್ರ, ಇ-ಮೇಲ್‌ಗೆ ಅಥವಾ ಅಂಚೆ ಮೂಲಕ ಕಳುಹಿಸಬಹುದು. ಅರ್ಜಿ ಸಲ್ಲಿಸಲು ಮೇ. 20 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗೆ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ದೂ.ಸಂ.080–22113147 ಹಾಗೂ 6364529319 ನ್ನು ಸಂಪರ್ಕಿಸಬಹುದು.

## ಸಂವಿಧಾನ ಅನುಸಾರ ಆಡಳಿತದಿಂದ ದೇಶ ಬಲಿಷ್ಠ – ಯು.ಟಿ. ಖಾದರ್



ಮಂಗಳೂರು : ಡಾ. ಬಿ.ಆರ್ ಅಂಬೇಡ್ಕರ್ ಹಲವಾರು ದೇಶಗಳನ್ನು ಸುತ್ತಿ ಸಂವಿಧಾನವನ್ನು ಅಧ್ಯಯನ ಮಾಡಿ, ನಮ್ಮ ದೇಶಕ್ಕೆ ಬೃಹತ್ ಮತ್ತು ಲಿಖಿತ ಸಂವಿಧಾನವನ್ನು ರಚಿಸಿಕೊಟ್ಟು, ಕೆಳ ವರ್ಗದಲ್ಲಿ ಹುಟ್ಟಿದ ಪ್ರತಿಯೊಬ್ಬರಿಗೂ ಸಮಾನತೆಯ ಹಕ್ಕು ಸಿಗಬೇಕು ಎಂದು ಹೋರಾಟ ನಡೆಸಿ ಯಶಸ್ಸನ್ನು ಕಂಡವರಾಗಿದ್ದಾರೆ. ನಮ್ಮ ದೇಶಕ್ಕೆ ಬೇಕಾಗುವ ರೀತಿಯಲ್ಲಿ ಸಂವಿಧಾನವನ್ನು ರಚಿಸುವಲ್ಲಿ ಶ್ರಮವಹಿಸಿದ್ದಾರೆ ಎಂದು ಸ್ಪೀಕರ್ ಹೇಳಿದರು. ಯಾವುದೇ ಸರಕಾರಗಳು ಡಾ. ಬಿ.ಆರ್ ಅಂಬೇಡ್ಕರ್‌ರವರ ಸಂವಿಧಾನಕ್ಕೆ ವಿರುದ್ಧವಾಗಿ ಆಡಳಿತ ನಡೆಸದೆ, ಸಂವಿಧಾನಕ್ಕೆ ಅನುಗುಣವಾಗಿ ಕೆಲಸವನ್ನು ನಿರ್ವಹಿಸಿದಾಗ ಮಾತ್ರ ಕ್ಷೇತ್ರ ಅಥವಾ ಜಿಲ್ಲೆ ಸುವ್ಯವಸ್ಥೆ ಶಾಂತಿಯಿಂದ ಇರುತ್ತದೆ. ಸಂವಿಧಾನಕ್ಕೆ ಅನುಗುಣವಾಗಿ ಆಡಳಿತ ನಡೆಸಿದರೆ ಮಾತ್ರ ದೇಶ ಬಲಿಷ್ಠವಾಗುತ್ತದೆ. ಅವರು ರಚಿಸಿದಂತಹ ಸಂವಿಧಾನ ದೇಶದ ಎಲ್ಲಾ ಸಮಸ್ಯೆಗಳ ಔಷಧದ ಗ್ರಂಥ ಎಂದು ವಿಧಾನಸಭೆ ಸ್ಪೀಕರ್ ಯು.ಟಿ. ಖಾದರ್ ಹೇಳಿದರು. ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಂಗಳೂರು ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಸಂವಿಧಾನ ಶಿಲ್ಪಿ ಭಾರತ ರತ್ನ ಡಾ. ಬಿ. ಆರ್. ಅಂಬೇಡ್ಕರ್ ಅವರ 134ನೇ ಜನ್ಮದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿದ ಮಾತನಾಡಿದರು.

## ವಿವಿ ಹಾಸ್ಟೆಲ್ ನಿರ್ಮಾಣದ 7 ಕೋಟಿ ರೂ. ದುರ್ಬಳಕೆ



ಮಂಗಳೂರು : ರಾಷ್ಟ್ರೀಯ ಉಚ್ಚತರ್ ಶಿಕ್ಷಾ ಅಭಿಯಾನ (RUSA-1) ಅಡಿಯಲ್ಲಿ ಬಾಲಕ ಮತ್ತು ಬಾಲಕಿಯರ ಹಾಸ್ಟೆಲ್‌ಗಳ ನಿರ್ಮಾಣಕ್ಕಾಗಿ ಪಡೆದ 7ಕೋಟಿ ರೂ.ಗಳನ್ನು ಮಂಗಳೂರು ವಿಶ್ವವಿದ್ಯಾಲಯ ದುರುಪಯೋಗಪಡಿಸಿಕೊಂಡಿರುವ ಆರೋಪ ಕೇಳಿಬಂದಿದೆ. ನಿಧಿ ಬಳಕೆಯ ಪರಿಶೀಲನೆಗಾಗಿ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಮಂಡಳಿಯು ರಚಿಸಿದ ತಜ್ಞರ ಸಮಿತಿಯ ಭೇಟಿಯ ವೇಳೆ ಇದು ಬಹಿರಂಗವಾಗಿದ್ದು, ಹಣ ಬಳಕೆಯಲ್ಲಿ ಆದ ವ್ಯತ್ಯಾಸವನ್ನು ಗಮನಿಸಿ ಬೆಂಗಳೂರಿನಲ್ಲಿ ನಡೆದ ರಾಜ್ಯದ ಉನ್ನತ ಶಿಕ್ಷಣ ಯೋಜನಾ ನಿರ್ದೇಶಕರ ಸಭೆಯಲ್ಲಿ ಈ ವಿಷಯವನ್ನು ಸಮಿತಿ ಪ್ರಸ್ತಾಪಿಸಿದೆ. ವಿಶ್ವವಿದ್ಯಾಲಯ ಆವರಣದಲ್ಲಿ ಯಾವುದೇ ಹಾಸ್ಟೆಲ್ ಕಟ್ಟಡಗಳು ಕಾಣಿಸದಿದ್ದರಿಂದ ಪರಿಶೀಲನೆಗಾಗಿ ತೆರಳಿದ್ದ ತಜ್ಞರ ಸಮಿತಿ ಅಧಿಕಾರಿಗಳನ್ನು ದಾಖಲೆಗಳನ್ನು ನೀಡುವಂತೆ ತಿಳಿಸಿದೆ. ಅಧಿಕಾರಿಗಳು "ಅಂತರ ರಾಷ್ಟ್ರೀಯ ಹಾಸ್ಟೆಲ್" ನಿರ್ವಾಣಕ್ಕಾಗಿ ಹಣವನ್ನು ಬೇರೆಡೆಗೆ ತಿರುಗಿಸಲಾಗಿದೆ ಎಂದು ಹೇಳುವ ಮೂಲಕ ಸಮಿತಿಯನ್ನು "ತಪ್ಪುದಾರಿಗೆಳೆಯಲು" ಪ್ರಯತ್ನಿಸಿದ್ದಾರೆ ಎಂದು ತಜ್ಞರ ಸಮಿತಿ ವರದಿಯಲ್ಲಿ ತಿಳಿಸಿದೆ ಎನ್ನಲಾಗಿದೆ. ಉನ್ನತ ಶಿಕ್ಷಣ ಇಲಾಖೆಗೆ ಸಲ್ಲಿಸಿದ ಬಳಕೆಯ ಪ್ರಮಾಣಪತ್ರದಲ್ಲಿ, ವಿಶ್ವವಿದ್ಯಾಲಯವು ಎರಡು ಹಾಸ್ಟೆಲ್‌ಗಳನ್ನು ನಿರ್ಮಿಸಿದೆ ಎಂದು ಹೇಳಿಕೊಂಡಿದೆ ಎನ್ನಲಾಗಿದೆ.

## ಅಂಗನವಾಡಿ ಕಾರ್ಯಕರ್ತೆಯರ ಪ್ರೋತ್ಸಾಹ ಧನಕ್ಕೆ ಒತ್ತಾಯ



ಮಂಗಳೂರು : ಬೂತ್ ಮಟ್ಟದ ಅಧಿಕಾರಿ (ಬಿಎಲ್‌ಒ)ಗಳಾಗಿ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರಿಗೆ ವಾರ್ಷಿಕ 7,000 ರೂ. ಪ್ರೋತ್ಸಾಹ ಧನ ನೀಡುತ್ತಿದ್ದು, ಇದನ್ನು 24,000 ರೂ.ಗಳಿಗೆ ಏರಿಕೆ ಮಾಡಬೇಕು ಎಂದು ಒತ್ತಾಯಿಸಿ ಮಿನಿ ವಿಧಾನ ಸೌಧದ ಎದುರು ಜಿಲ್ಲೆಯ ಬಿಎಲ್‌ಒಗಳು ಪ್ರತಿಭಟನೆ ನಡೆಸಿದರು. ಚುನಾವಣಾ ಸಭೆಗಳ ಸಂದರ್ಭ ಯಾವುದೇ ಪ್ರಯಾಣ ಭತ್ತೆಯನ್ನೂ ಒದಗಿಸಲಾಗುತ್ತಿಲ್ಲ. ಕೆಲವೆಡೆ ಬಿಎಲ್‌ಒಗಳನ್ನು ಸಾಕಷ್ಟು ಶೋಷಣೆ ನೀಡಿ ದುಡಿಸಲಾಗುತ್ತಿದೆ ಎಂದು ಪ್ರತಿಭಟನಾ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಜಿಲ್ಲಾ ಸಂಘಟನಾ ಸಲಹೆಗಾರರಾದ ಲತಾ ಅಂಬೆಕಲ್ಲು ಆಕ್ಷೇಪಿಸಿದರು. ದ.ಕ. ಜಿಲ್ಲಾ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಸಂಘದ ವತಿಯಿಂದ ನಡೆದ ಪ್ರತಿಭಟನೆಯಲ್ಲಿ ಮಂಗಳೂರು ನಗರ ಕಾರ್ಯದರ್ಶಿ ಆಶಾಲತಾ ಎಂ.ವಿ., ಬಂಟ್ವಾಳ ಕೋಶಾಧಿಕಾರಿ ರೇಣುಕಾ ಬಂಟ್ವಾಳ, ಬೆಳ್ತಂಗಡಿ ಉಪಾದ್ಯಕ್ಷೆ ರಾಜೀವಿ, ವಿಟ್ಲ ಉಪಾಧ್ಯಕ್ಷೆ ಗುಲಾಬಿ, ಮಂಗಳೂರು ಗ್ರಾಮಾಂತರ ರಾಜ್ಯ ಪ್ರತಿನಿಧಿ ಚಂದ್ರಾವತಿ, ಬಂಟ್ವಾಳ ಘಟಕ ಅಧ್ಯಕ್ಷೆ ವಿಜಯವಾಣಿ, ಪುತ್ತೂರು ಅಧ್ಯಕ್ಷೆ ಕಮಲ ಮೊದಲಾದವರು ಉಪಸ್ಥಿತರಿದ್ದರು.

## ಹಕ್ಕು ಪತ್ರ ಪಡೆದವರಿಗೆ ನಿವೇಶನ ನೀಡದೆ ವಂಚನೆ



ಮಂಗಳೂರು : ಕುಪ್ಪೆಪದವು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಹಕ್ಕು ಪತ್ರ ಪಡೆದ 97 ಕುಟುಂಬಗಳಿಗೆ ಹಕ್ಕು ಪತ್ರ ವಿತರಿಸಿ ಏಳು ವರ್ಷಗಳು ಕಳೆದರೂ ನಿವೇಶನ ಒದಗಿಸದೆ ವಂಚಿಸಲಾಗಿದೆ ಎಂದು ಆರೋಪಿಸಿ ಸಂತ್ರಸ್ತರು ಕುಪ್ಪೆಪದವು ನಿವೇಶನ ರಹಿತರ ಹೋರಾಟ ಸಮಿತಿ ನೇತೃತ್ವದಲ್ಲಿ ಗುರುಪುರ ನಾಡ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು. 2018 ರಲ್ಲಿ ಶಾಸಕ ಭರತ್ ಶೆಟ್ಟಿ ನೇತೃತ್ವದಲ್ಲಿ ತರಾತುರಿಯಲ್ಲಿ 97 ಕುಟುಂಬಗಳಿಗೆ ಹಕ್ಕು ಪತ್ರ ವಿತರಿಸಿ ನಿವೇಶನಗಳನ್ನು ಗುರುತು ಮಾಡಲಾಗಿತ್ತು. ನಿವೇಶನ ಒದಗಿಸದೆ ಬಡ ನಿವೇಶನ ರಹಿತರನ್ನು ಸತಾಯಿಸಲಾಗುತ್ತಿತ್ತು. ಕಳೆದ ಜನವರಿಯಲ್ಲಿ ಸಂತ್ರಸ್ತರು ಹೋರಾಟ ಸಮಿತಿ ರಚಿಸಿಕೊಂಡು ಜಮೀನು ಸ್ವಾಧೀನ ನೀಡುವಂತೆ ಹೋರಾಟ ಆರಂಭಿಸಿದ್ದರು. ಈ ಕುರಿತು ಜನವರಿಯಲ್ಲಿ ಕುಪ್ಪೆಪದವು ಪಂಚಾಯತ್ ಮುಂಭಾಗ ನಡೆದ ಧರಣಿಯಲ್ಲಿ ಮನವಿ ಸ್ವೀಕರಿಸಲು ಆಗಮಿಸಿದ ಡೆಪ್ಯುಟಿ ತಹಶೀಲ್ದಾರ್, ಫೆಬ್ರವರಿ ಕೊನೆಯಲ್ಲಿ ನಿವೇಶನ ಸ್ವಾಧೀನ ನೀಡುವುದಾಗಿ ಭರವಸೆ ನೀಡಿದ್ದರು. ಆದರೆ, ಭರವಸೆ ಈಡೇರಿಲ್ಲ ಎಂದು ಪ್ರತಿಭಟನಾನಿರತರು ಆಕ್ರೋಶ ವ್ಯಕ್ತಪಡಿಸಿದರು.

## ಕೇಂದ್ರ ಸರಕಾರದಿಂದ ಪ್ರಜಾಪ್ರಭುತ್ವದ ಕಗ್ಗೊಲೆ: ಭಂಡಾರಿ



ಉಡುಪಿ : ಪ್ರಜಾಪ್ರಭುತ್ವದ ಅಂಗ ಸಂಸ್ಥೆಗಳಾದ ಈಡಿ, ಸಿಬಿಐ, ಐಟಿಯನ್ನು ದ್ವೇಷ ರಾಜಕಾರಣಕ್ಕಾಗಿ ದುರುಪಯೋಗ ಪಡಿಸಿಕೊಂಡು ವಿರೋಧ ಪಕ್ಷದ ನಾಯಕರ ಧ್ವನಿಯನ್ನು ಧಮನಗೊಳಿಸುತ್ತಿರುವ ಕೇಂದ್ರ ಬಿಜೆಪಿ ಸರಕಾರದ ವಿರುದ್ಧ ಉಡುಪಿ ಜಿಲ್ಲಾ ಕಾಂಗ್ರೆಸ್ ಸಮಿತಿಯ ನೇತೃತ್ವದಲ್ಲಿ ಬುಧವಾರ ಆದಿ ಉಡುಪಿಯಲ್ಲಿರುವ ಆದಾಯ ತೆರಿಗೆ ಕಚೇರಿಯ ಮುಂದೆ ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನಕಾರರನ್ನುದ್ದೇಶಿಸಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ, ಕೆಪಿಸಿಸಿ ಕಾರ್ಯಾಧ್ಯಕ್ಷ ಮಂಜುನಾಥ್ ಭಂಡಾರಿ, ದೇಶದ ಸ್ವಾತಂತ್ರ್ಯಕ್ಕಾಗಿ ನೆಹರು ತನ್ನ ಇಡೀ ಸಂಪತ್ತು ಒತ್ತೆ ಇಟ್ಟು 1938ರಲ್ಲಿ ನ್ಯಾಷನಲ್ ಹೆರಾಲ್ಡ್ ಪತ್ರಿಕೆಯನ್ನು ಆರಂಭಿಸಿದ್ದರು. ಇದೀಗ ಕೇಂದ್ರ ಬಿಜೆಪಿ ಸರಕಾರ ಗಾಂಧಿ ಕುಟುಂಬದ ಮೇಲೆ ದ್ವೇಷ ರಾಜಕಾರಣ ಮಾಡುತ್ತಿರುವುದು ಪ್ರಜಾಪ್ರಭುತ್ವದ ಕಗ್ಗೊಲೆಯಾಗಿದೆ. ಬಿಜೆಪಿ ಸರಕಾರ ಈಡಿ ಮೂಲಕ ವಿರೋಧ ಪಕ್ಷಗಳ ಕೈಗಳನ್ನು ಕಟ್ಟಿ ಹಾಕಲು ಮುಂದಾಗುತ್ತಿದೆ ಎಂದು ಆರೋಪಿಸಿದರು.

## ಬೀಡಿ ಕಾರ್ಮಿಕರ ವೇತನ, ತುಟ್ಟಿಭತ್ಯೆ ಕಡಿತಕ್ಕೆ ಪ್ರತಿಭಟನೆ



ಉಡುಪಿ : ಬೀಡಿ ಕಾರ್ಮಿಕರ ಕನಿಷ್ಟ ವೇತನ ಹಾಗೂ ತುಟ್ಟಿಭತ್ಯೆ ಯನ್ನು ಕಡಿತಗೊಳಿಸಿದ ಸರಕಾರದ ಕ್ರಮವನ್ನು ಖಂಡಿಸಿ, ಈ ಕುರಿತ ಆದೇಶ ವಾಪಸ್ಸಾತಿಗೆ ಒತ್ತಾಯಿಸಿ ಇಂದು ಬೀಡಿ ಎಂಡ್ ಟ್ಯೋಬ್ಯಾಕೋ ಲೇಬರ್ ಯೂನಿಯನ್ ನೇತೃತ್ವದಲ್ಲಿ ಉಡುಪಿಯ ತಹಶಿಲ್ದಾರರ ಕಛೇರಿ ಮುಂದೆ ಸರಕಾರದ ಆದೇಶ ಪ್ರತಿ ಸುಟ್ಟು ಹಾಕಿ ಪ್ರತಿಭಟನೆ ನಡೆಸಲಾಯಿತು. ಬಡ ಬೀಡಿ ಕಾರ್ಮಿಕರ ಹಿತರಕ್ಷಣೆ ಮಾಡಬೇಕಾದ ಕರ್ನಾಟಕ ಸರಕಾರ ಬೀಡಿ ಮಾಲಕರ ಹಿತರಕ್ಷಣೆಗೆ ಮುಂದಾಗಿರುವುದನ್ನು ಪ್ರತಿಭಟನಕಾರರು ಖಂಡಿಸಿದರು. ಬೀಡಿ ಕಾರ್ಮಿಕರಿಗೆ ತುಟ್ಟಿಭತ್ಯೆ, ನಿಗದಿತ ಕನಿಷ್ಠ ವೇತನ ಪಾವತಿ ಸದೇ ದುಡಿದ ಕಾರ್ಮಿಕರಿಗೆ ವೇತನ ಬಾಕಿ ಮಾಡಿರುವ ಬೀಡಿ ಮಾಲಕರ ವಿರುದ್ಧ ಕಾನೂನು ಕ್ರಮಕೈಗೊಳ್ಳಲು ಸರಕಾರ ವಿಫಲವಾಗಿದೆ ಎಂದವರು ದೂರಿದರು.

## ಸುಳ್ಯದ ಎರಡು ಪ್ರಮುಖ ರಸ್ತೆಗಳಿಗೆ ಗುದ್ದಲಿಪೂಜೆ



ಸುಳ್ಯ: ಕೇಂದ್ರ ಸರ್ಕಾರದ ರಸ್ತೆ ಹಾಗೂ ಮೂಲಸೌಕರ್ಯ ನಿಧಿ(ಸಿಆರ್ ಐಎಫ್) ಯಡಿಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ವಿಧಾನ ಸಭಾ ಕ್ಷೇತ್ರದ ಎರಡು ಪ್ರಮುಖ ರಸ್ತೆಗಳನ್ನು ಸುಮಾರು 6 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸುವ ಕಾಮಗಾರಿಗಳಿಗೆ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರ ನೇತೃತ್ವದಲ್ಲಿ ಗುದ್ದಲಿಪೂಜೆ ನೆರವೇರಿಸಲಾಯಿತು. ಸಿಆರ್ ಐಎಫ್ ಅನುದಾನದಡಿ ಸುಳ್ಯ ತಾಲೂಕಿನ ನಿಂತಿಕಲ್ಲು– ಬೆಳ್ಳಾರೆ ರಸ್ತೆಯನ್ನು ಸುಮಾರು 3.72 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ. ಈ ರಸ್ತೆಯಲ್ಲಿ ಒಟ್ಟು ಸುಮಾರು 6.20 ಕಿಮೀ. ಮಾರ್ಗವನ್ನು ಅಭಿವೃದ್ಧಿಪಡಿಸಲಾಗುತ್ತಿದ್ದು, ಈ ಕಾಮಗಾರಿಗಳಿಗೆ ಮಂಗಳವಾರ ಸಂಸದ ಕ್ಯಾ. ಚೌಟ ನಿಂತಿಕಲ್ಲು ಜಂಕ್ಷನ್‌ನಲ್ಲಿ ಗುದ್ದಲಿಪೂಜೆ ನೆರವೇರಿಸಿದ್ದಾರೆ. ಅದೇ ರೀತಿ ಕೇಂದ್ರ ಸರ್ಕಾರದ ಸಿಆರ್ ಐಎಫ್ ನಿಧಿಯಡಿ ಸುಳ್ಯ–ಪೈಚಾರ್–ಬೆಳ್ಳಾರೆಯ ರಸ್ತೆಯು 2.28 ಕೋಟಿ. ರೂ. ವೆಚ್ಚದಲ್ಲಿ ಅಭಿವೃದ್ಧಿಯಾಗಲಿದೆ. ಈ ರಸ್ತೆಯು ಒಟ್ಟು 3.80 ಕಿ.ಮಿ ಉನ್ನತಿಕರಣಗೊಳ್ಳಲಿದೆ. ಈ ಹಿನ್ನಲೆಯಲ್ಲಿ ನಿಂತಿಕಲ್ಲಿನಲ್ಲಿ ಕ್ಯಾ. ಚೌಟ ನೇತೃತ್ವದಲ್ಲಿ ಕಾಮಗಾರಿ ಆರಂಭಿಸುವುದಕ್ಕೆ ಗುದ್ದಲಿಪೂಜೆ ನೆರವೇರಿಸಲಾಗಿದೆ.

## ಮೋದಿ ಸರಕಾರದಿಂದ ಕ್ರೀಡಾಕ್ಷೇತ್ರದಲ್ಲಿ ಮಹತ್ತರ ಬದಲಾವಣೆ – ಕ್ಯಾ. ಚೌಟ



ಬಂಟ್ವಾಳ: ದೇಶದಲ್ಲಿ ಕಳೆದ ಹತ್ತು ವರ್ಷದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರವು ಕ್ರೀಡಾಕ್ಷೇತ್ರದಲ್ಲಿ ಮಹತ್ತರವಾದ ಬದಲಾವಣೆ ತಂದಿದೆ. ಗ್ರಾಮೀಣ ಭಾಗದ ನೂರಾರು ಕ್ರೀಡಾಪಟುಗಳಿಗೆ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಕ್ರೀಡಾ ಸ್ಪರ್ಧೆಗಳಲ್ಲಿ ತಮ್ಮ ಪ್ರತಿಭೆ ಪ್ರದರ್ಶಿಸುವುದಕ್ಕೆ ಎಲ್ಲಾ ರೀತಿಯ ಪ್ರೋತ್ಸಾಹ, ಅವಕಾಶಗಳನ್ನು ಕಲ್ಪಿಸುವಲ್ಲಿ ಮೋದಿ ಸರ್ಕಾರ ಮಹತ್ತರ ಹೆಜ್ಜೆ ಇರಿಸಿದೆ. ಕಳೆದ ಹತ್ತು ವರ್ಷಗಳಲ್ಲಿ ಭಾರತದಲ್ಲಿ ಕ್ರೀಡೆಯನ್ನು ನೋಡುವ ದೃಷ್ಟಿ ಬದಲಾಗಿದೆ ಎಂದು ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಹೇಳಿದರು. ಹನುಮ ಜಯಂತಿ ಪ್ರಯುಕ್ತ ಕ್ರೀಡಾಭಾರತಿ ಮತ್ತು ದ.ಕ. ಜಿಲ್ಲಾ ಅಮೆಚೂರ್ ಕಬಡ್ಡಿ ಅಸೋಸಿಯೇಶನ್ ಸಹಭಾಗಿತ್ವದಲ್ಲಿ ಬಂಟ್ವಾಳದ ಸ್ಪರ್ಶ ಕಲಾ ಮಂದಿರದಲ್ಲಿ ನಡೆದ ಸಂಸದರ ಪ್ರದೇಶಾಭಿವೃದ್ಧಿ ನಿಧಿ ಹಾಗೂ ಎನ್.ಎಂ.ಪಿ.ಎಯ ಸಿ.ಎಸ್.ಆರ್. ನಿಧಿಯಡಿ ದಕ್ಷಿಣ ಕನ್ನಡ ಜಿಲ್ಲೆಯ ಎಂಟು ತಾಲೂಕುಗಳ ಕಬ್ಬಡ್ಡಿ ಅಸೋಸಿಯೇಶನ್‌ಗಳಿಗೆ ಕಬ್ಬಡ್ಡಿ ಮ್ಯಾಟ್ ವಿತರಣಾ ಕಾರ್ಯಕ್ರಮ ಉದ್ಘಾಟಿಸಿದ ನಂತರ ಮಾತಾಡಿದ ಅವರು, ಖೇಲೋ ಇಂಡಿಯಾ ಮೂಲಕ ಕ್ರೀಡಾಕ್ಷೇತ್ರಕ್ಕೆ ಪ್ರೋತ್ಸಾಹ ನೀಡುವುದರ ಜೊತೆಗೆ ಮೂಲಸೌಕರ್ಯವನ್ನು ಒದಗಿಸುವ ಕಾರ್ಯವನ್ನು ಮಾಡಲಾಗುತ್ತಿದೆ ಎಂದರು.

## ಕಾಂಗ್ರೆಸ್ ಆಡಳಿತದ ನಿರ್ಲಕ್ಷ್ಯಕ್ಕೆ ಜನತೆಗೆ ಸಂಕಷ್ಟ–ಕಾಮತ್



ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ರಾಜಕಾಲುವೆಗಳಲ್ಲಿ ಹಾಗೂ ಚರಂಡಿಗಳಲ್ಲಿ ಹೂಳೆತ್ತುವುದು ಸೇರಿದಂತೆ ಮುಂಬರುವ ಮಳೆಗಾಲಕ್ಕೆ ಯಾವುದೇ ಅಗತ್ಯ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳದಿರುವುದನ್ನು ಖಂಡಿಸಿ ಶಾಸಕ ವೇದವ್ಯಾಸ್ ಕಾಮತ್ ನೇತೃತ್ವದಲ್ಲಿ ಬಿಜೆಪಿಯ ನಿಕಟ ಪೂರ್ವ ಪಾಲಿಕೆ ಸದಸ್ಯರುಗಳು ಪಾಲಿಕೆ ಆಯುಕ್ತರನ್ನು ಭೇಟಿ ಮಾಡಿ ತುರ್ತು ಕ್ರಮಕ್ಕೆ ಆಗ್ರಹಿಸಿದರು. ಈ ವೇಳೆ ಮಾತನಾಡಿದ ಶಾಸಕರು, ಪಾಲಿಕೆಯಲ್ಲಿ ಬಿಜೆಪಿ ಆಡಳಿತದಲ್ಲಿದ್ದಾಗ ಮಾರ್ಚ್ ಅಂತ್ಯದ ವೇಳೆಗೆ ರಾಜಕಾಲುವೆಗಳಲ್ಲಿ ಹಾಗೂ ಚರಂಡಿಗಳಲ್ಲಿ ಹೂಳೆತ್ತುವುದು ಸೇರಿದಂತೆ ಮಳೆಗಾಲದ ಪೂರ್ವ ಸಿದ್ಧತೆಗಳ ಕುರಿತು ಕಾರ್ಯ ಚಟುವಟಿಕೆಗಳು ಆರಂಭವಾಗುತ್ತಿದ್ದವು. ಆದರೆ ಪ್ರಸ್ತುತ ಪಾಲಿಕೆಯಲ್ಲಿ ಬಿಜೆಪಿಯ ಅವಧಿಯು ಮುಗಿದ ಪರಿಣಾಮ ರಾಜ್ಯ ಕಾಂಗ್ರೆಸ್ ಸರ್ಕಾರದ ಅಧೀನದಲ್ಲಿರುವ ಜಿಲ್ಲಾಡಳಿತ ಹಾಗೂ ಮ.ನ.ಪಾ ಅಧಿಕಾರಿಗಳ ಆಡಳಿತ ನಡೆಯುತ್ತಿದ್ದು, ಏಪ್ರಿಲ್ ತಿಂಗಳ ಮಧ್ಯಭಾಗಕ್ಕೆ ಬಂದರೂ ಯಾವುದೇ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೆತ್ತಿಕೊಂಡಿಲ್ಲ. ಇದೇ ಕಾರಣಕ್ಕೆ ಇತ್ತೀಚಿಗೆ ಸುರಿದ ಸಣ್ಣ ಮಳೆಗೂ ರಾಜಕಾಲುವೆ ನೀರು ಮನೆಗೆ ನುಗ್ಗಿದ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿವೆ. ಜಿಲ್ಲಾ ಉಸ್ತುವಾರಿ ಸಚಿವರು ನಗರದೆಲ್ಲೆಡೆ ವಿಪರೀತವಾಗಿರುವ ಕಸದ ಸಮಸ್ಯೆಗಳ ಬಗ್ಗೆ ಕನಿಷ್ಠ ಒಮ್ಮೆಯಾದರೂ ಪಾಲಿಕೆ ಅಧಿಕಾರಿಗಳ ಸಭೆ ನಡೆಸಬೇಕಿತ್ತು ಎಂದರು.

## ಎಮ್.ಸಿ.ಸಿ. ಬ್ಯಾಂಕ್‌ಗೆ 13.00 ಕೋಟಿ ಲಾಭ–ಅನಿಲ್ ಲೋಬೋ





ಮಂಗಳೂರು: ಕರ್ನಾಟಕದ ಸಹಕಾರಿ ಬ್ಯಾಂಕಿಂಗ್ ಕ್ಷೇತ್ರದಲ್ಲಿ 113 ವರ್ಷಗಳ ಇತಿಹಾಸವಿರುವ ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯ ಹೆಮ್ಮೆಯ ಎಮ್.ಸಿ.ಸಿ ಬ್ಯಾಂಕ್ ಲಿಮಿಟೆಡ್ 31 ಮಾರ್ಚ್ 2025ರಂದು ಮುಕ್ತಾಯಗೊಂಡ ವಿತ್ತೀಯ ವರ್ಷದಲ್ಲಿ ಒಟ್ಟು 13.00 ಕೋಟಿ ರೂಪಾಯಿ ವ್ಯವಹಾರಿಕ ಲಾಭಗಳಿಕೆಯನ್ನು ದಾಖಲಿಸಿದೆ. ಸತತವಾಗಿ ಎನ್.ಪಿ.ಎ. ಪ್ರಮಾಣವನ್ನು ಕಡಿಮೆ ಗೊಳಿಸಲು ಬ್ಯಾಂಕ್ ಶ್ರಮಿಸುತ್ತಿದ್ದು, ಪ್ರಸ್ತುತ ವರ್ಷದಲ್ಲಿ 1.30% ಎನ್.ಪಿ.ಎ. ದಾಖಲಿಸಿದೆ ಎಂದು ಎಮ್‌ಸಿಸಿ ಬ್ಯಾಂಕ್‌ನ ಅಧ್ಯಕ್ಷ ಅನಿಲ್ ಲೋಬೊ ತಿಳಿಸಿದರು. ಅವರು ನಗರದ ಎಮ್‌ಸಿಸಿ ಬ್ಯಾಂಕ್ ಆವರಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿ, ದಾಖಲೆಯ ಲಾಭ ಮತ್ತು ಕನಿಷ್ಠ ಎನ್.ಪಿ.ಎ. ಜೊತೆಗೆ, 2024–2025ನೇ ವಿತ್ತೀಯ ವರ್ಷದಲ್ಲಿ, ಬ್ಯಾಂಕಿನ ಅಧ್ಯಕ್ಷ ಅನಿಲ್ ಲೋಬೊ ನೇತೃತ್ವದ ಆಡಳಿತ ಮಂಡಳಿ, ಅಧಿಕಾರಿ ವರ್ಗ ಮತ್ತು ಸಿಬ್ಬಂದಿಯ ಶ್ರಮದಿಂದ, ಬ್ಯಾಂಕ್ ಸ್ಥಾಪನೆಯಾದಂದಿನಿಂದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಗೆ ಮಾತ್ರ ಸೀಮಿತವಾಗಿದ್ದ ಬ್ಯಾಂಕಿನ ಕಾರ್ಯವ್ಯಾಪ್ತಿಯನ್ನು ಇಡೀ ಕರ್ನಾಟಕ ರಾಜ್ಯಕ್ಕೆ ವಿಸ್ತರಿಸಿದ್ದು, ವಿತ್ತೀಯ ವರ್ಷದಲ್ಲಿ ಬೆಳ್ತಂಗಡಿ ಮತ್ತು ಬೆಳ್ಮಣ್‌ನಲ್ಲಿ ಕ್ರಮವಾಗಿ 18ನೇ ಮತ್ತು 19ನೇ ಶಾಖೆಯನ್ನು ತೆರೆದಿದ್ದು, ಬೈಂದೂರ್‌ನಲ್ಲಿ ಶೀಘ್ರದಲ್ಲೇ ಶಾಖೆಯನ್ನು ತೆರೆಯಲಾಗುವುದು ಎಂದರು.

## 'ರೋಹನ್ ಗಾರ್ಡನ್' ಅಪಾರ್ಟ್‌ಮೆಂಟ್‌ಗೆ ಭೂಮಿಪೂಜೆ



ಮಂಗಳೂರು: ರೋಹನ್ ಕಾರ್ಪೋರೇಶನ್‌ನ ಮತ್ತೊಂದು ವಸತಿ ಸಮುಚ್ಚಯ ರೋಹನ್ ಗಾರ್ಡನ್ ಯೋಜನೆಗೆ ನಗರದ ಕದ್ರಿ ಶಿವಬಾಗ್ 2ನೇ ಕ್ರಾಸ್‌ನಲ್ಲಿ ಭೂಮಿಪೂಜೆ ನಡೆಯಿತು.ಬೆಂದೂರ್ ಸೈಂಟ್ ಸೆಬಾಸ್ಟಿಯನ್ ಚರ್ಚ್‌ನ ಧರ್ಮಗುರುಗಳಾದ ಫಾದರ್ ವಾಲ್ಟರ್ ಡಿಸೋಜ ಭೂಮಿ ಪೂಜೆ ನೆರವೇರಿಸಿ, ದೇವರ ಮೇಲೆ ಅಚಲ ವಿಶ್ವಾಸ ಮತ್ತು ಕಠಿಣ ಪರಿಶ್ರಮದಿಂದ ಮಹತ್ಸಾಧನೆ ಮಾಡಿ ಸಮಾಜ ಸೇವೆ ಮಾಡುವ ಕನಸಿಗೆ ರೋಹನ್ ಮೊಂತೇರೊ ನಿದರ್ಶನ. ಅವರ ಎಲ್ಲ ಕನಸುಗಳೂ ನನಸಾಗಲಿ ಎಂದು ಆಶೀರ್ವಚನ ನೀಡಿದರು. ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಅಧ್ಯಕ್ಷ ಡಾ.ಎಂ.ಎನ್.ರಾಜೇಂದ್ರ ಕುಮಾರ್ ಕಾರ್ಯಕ್ರಮ ಉದ್ಘಾಟಿಸಿ, ರೊಹನ್ ಮೊಂತೇರೊ ಜನರ ಅಪೇಕ್ಷೆಗೆ ಪೂರಕ ಗುಣಮಟ್ಟದ ಕಟ್ಟಡಗಳನ್ನು ನಿರ್ಮಿಸಿ, ಗ್ರಾಹಕರು ಸಂತೃಪ್ತರಾಗಿದ್ದರಿಂದ 15 ದಿನದಲ್ಲಿ ಮೂರನೇ ಯೋಜನೆಗೆ ಶಿಲಾನ್ಯಾಸ ನಡೆದಿದೆ. ಶೀಘ್ರ 50ನೇ ಯೋಜನೆ ಪೂರೈಸಲಿ ಎಂದು ಹಾರೈಸಿದರು.

## ಸ್ಟಾರ್ಟಪ್ ಉತ್ತೇಜಿಸಲು ಉಸ್ತುವಾರಿ ಕಾರ್ಯದರ್ಶಿ ಸೂಚನೆ



ಮಂಗಳೂರು : ಉದ್ಯಮ ಕ್ಷೇತ್ರದಲ್ಲಿ ನಾವೀನ್ಯತೆ ತರಲು ಸ್ಟಾರ್ಟಪ್‌ಗಳಿಗೆ ಹಣಕಾಸು ಬೆಂಬಲ ನೀಡುವ ವಿವಿಧ ಯೋಜನೆಗಳನ್ನು ಸರಕಾರ ಜಾರಿಗೆ ತಂದಿದ್ದು, ಜಿಲ್ಲೆಯಲ್ಲಿ ಇವುಗಳಿಗೆ ಹೆಚ್ಚು ಮಂದಿಯನ್ನು ಆಕರ್ಷಿಸಲು ಅಗತ್ಯ ಕ್ರಮಕೈಗೊಳ್ಳಲು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ತುಳಸಿ ಮದ್ದಿನೇನಿ ಸೂಚಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇಂಜಿನಿಯರಿಂಗ್, ವೈದ್ಯಕೀಯ ಸೇರಿದಂತೆ ಸಾಕಷ್ಟು ವೃತ್ತಿಪರ ಶಿಕ್ಷಣ ಸಂಸ್ಥೆಗಳಿವೆ. ಆದರೂ, ಸ್ಟಾರ್ಟಪ್ ಯೋಜನೆಗಳಿಗೆ ಹೆಚ್ಚಿನ ಬೇಡಿಕೆ ಜಿಲ್ಲೆಯಲ್ಲಿ ಕಂಡುಬಂದಿಲ್ಲ. ಈ ನಿಟ್ಟಿನಲ್ಲಿ ಜಿಲ್ಲೆಯ ವೃತ್ತಿಪರ ಶಿಕ್ಷಣ ಸಂಸ್ಥೆಗಳೊಂದಿಗೆ ಸಂಯೋಜಿಸಿ ಸ್ಟಾರ್ಟಪ್ ಯೋಜನೆಗಳ ಬಗ್ಗೆ ಜಾಗೃತಿ ಕಾರ್ಯಕ್ರಮ ನಡೆಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಎಂ.ಪಿ. ಅವರು ಮಾತನಾಡಿ, ವೃತ್ತಿಪರ ಶಿಕ್ಷಣ ಮುಗಿಸಿದ ವಿದ್ಯಾರ್ಥಿಗಳಿಗೆ ಸ್ಟಾರ್ಟಪ್ ಉದ್ಯಮಗಳಿಗೆ ಉತ್ತೇಜಿಸಲು ಈಗಾಗಲೇ ಇಂಜಿನಿಯರಿಂಗ್ ಕಾಲೇಜುಗಳೊಂದಿಗೆ ಕಾರ್ಯಕ್ರಮ ನಡೆಸಲಾಗುತ್ತಿದೆ ಎಂದರು.

# ಸುದ್ದಿ ತುಣುಕು

ಚಾಮರಾಜನಗರ ಜಿಲ್ಲೆಯ ಪ್ರಸಿದ್ಧ ಮಲೆ ಮಹದೇಶ್ವರ ದೇಗುಲದಲ್ಲಿ 3.26 ಕೋಟಿ ರೂಪಾಯಿ ಕಾಣಿಕೆ ಸಂಗ್ರಹ.

ಕೇಂದ್ರ ಸರ್ಕಾದಿಂದ ಬಡವರ ರಕ್ತ ಕುಡಿಯುವ ಕೆಲಸ ಆಗುತ್ತಿದೆ. ಆರ್.ಅಶೋಕ್, ವಿಜಯೇಂದ್ರ, ಛಲವಾದಿ ನಾರಾಯಣ ಸ್ವಾಮಿ ಇದನ್ನು ಅರ್ಥ ಮಾಡಿಕೊಳ್ಳಿ. ಸುಮ್ಮನೆ ಬೂಟಾಟಿಕೆ ಮಾಡುತ್ತಿದ್ದೀರಾ? ಎಂದು ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ.

ಕೇಂದ್ರ ಸರ್ಕಾರ 2020-21ರ ಏಪ್ರಿಲ್ ತಿಂಗಳಲ್ಲಿ ಸ್ವಾಮಿತ್ವ ಯೋಜನೆ ಜಾರಿ ಮಾಡಿದ್ದು, ಈ ಯೋಜನೆಯು 9 ರಾಜ್ಯಗಳಲ್ಲಿ ಪ್ರಾಯೋಗಿಕ ಹಂತದಲ್ಲಿ ಯಶಸ್ವಿಯಾಗಿ ಪೂರ್ಣಗೊಂಡ ನಂತರ ಉದ್ಘಾಟನೆಗೊಂಡಿತು.

ಬೆಂಗಳೂರಲ್ಲಿ ಮೆಟ್ರೋ ಕಾಮಗಾರಿ ವೇಳೆ ವಯಾಡೆಕ್ಟ್ ಉರುಳಿ ಆಟೋ ಚಾಲಕ ಖಾಸೀಂ ಸಾಬ್ ಮೃತಪಟ್ಟ ಪ್ರಕರಣ ಸಂಬಂಧ ಮೂವರ ವಿರುದ್ಧ ಯಲಹಂಕ ಸಂಚಾರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಕೊಪ್ಪಳದ ಇಟಗಿ ಮಹಾದೇವ ದೇವಾಲಯುವನ್ನು ವಿಶ್ವ ಪಾರಂಪರಿಕ ಪಟ್ಟಿಗೆ ನಾಮನಿರ್ದೇಶನ ಮಾಡುವಂತೆ ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿಗೆ ಪುರಾತತ್ವ ಇಲಾಖೆ ಪತ್ರ ಬರೆದಿದೆ.

ಕರಾವಳಿ ದೈವಾರಾಧನೆಯ ಭಾಗವಾದ ಕೋಲವನ್ನು ಹಾಸನದ ದೋಲಮನೆ ಗ್ರಾಮದಲ್ಲಿ ಆಯೋಜನೆ ಮಾಡಲಾಗಿದ್ದು, ಮಂಗಳೂರಿನಿಂದ ಆಗಮಿಸಿದ ತಂಡ ಈ ದೈವಿಕ ಕಾರ್ಯಕ್ರಮವನ್ನು ನಡೆಸಿಕೊಟ್ಟಿತು.

ಜಾತಿ ಗಣತಿ ವರದಿಯು ದೋಷಪೂರಿತವಾಗಿದೆ. ವರದಿಯಲ್ಲಿ ಲಿಂಗಾಯತರಿಗೆ ಅನ್ಯಾಯವಾಗಿದೆ. ಹೀಗಾಗಿ, ಸರ್ಕಾರ ಇನ್ನೊಮ್ಮೆ ಸಮೀಕ್ಷೆ ನಡೆಸಿ, ವರದಿ ಸಿದ್ಧಪಡಿಸಬೇಕು" ಎಂದು ಗದಗದ ತೋಂಟದಾರ್ಯ ಮಠದ ಪೀಠಾಧಿಪತಿ ಡಾ. ಸಿದ್ದರಾಮ ಶ್ರೀಗಳು ಆಗ್ರಹಿಸಿದ್ದಾರೆ.

ಅತ್ಯಾಚಾರ ಆರೋಪ ಸಂಬಂಧ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ದೋಷಾರೋಪ ನಿಗದಿ ಕುರಿತಂತೆ ವಿಚಾರಣಾ ನ್ಯಾಯಾಲಯದ ಪ್ರಕ್ರಿಯೆಗೆ ತಡೆ ನೀಡಲು ಹೈಕೋರ್ಟ್ ನಿರಾಕರಿಸಿದೆ.

ಮುಸ್ಲಿಂರಿಗೆ ಸರ್ಕಾರಿ ಗುತ್ತಿಗೆಗಳಲ್ಲಿ ಶೇ. 4 ರಷ್ಟು ಮೀಸಲಾತಿ ನೀಡಬೇಕೆಂಬ ವಿಧೇಯಕಕ್ಕೆ ಸಹಿ ಹಾಕುವಂತೆ ಕೋರಿ ರಾಜ್ಯಪಾಲರ ಭವನಕ್ಕೆ ತಲುಪಿದ್ದ ಮಸೂದೆ ಈಗ ರಾಷ್ಟ್ರಪತಿ ಭವನಕ್ಕೆ ರವಾನೆಯಾಗಿದೆ.

ಹೊಸಪೇಟೆಯ ತುಂಗಭದ್ರಾ ಡ್ಯಾಂ ಬಳಿ ಇರುವ ಗುಡ್ಡಗಳ ಸರಣಿಯಲ್ಲಿ ಭಾರಿ ಬೆಂಕಿ ಕಾಣಿಸಿಕೊಂಡಿದ್ದು, ಬೆಂಕಿಯ ಜ್ವಾಲೆ ಆತಂಕ ಮೂಡಿಸಿದೆ.

ಅಮಾಯಕರ ಆರೋಗ್ಯಕ್ಕೆ ಹಾನಿಯನ್ನುಂಟು ಮಾಡುತ್ತಿರುವ ನಕಲಿ ವೈದ್ಯರನ್ನು ಪತ್ತೆ ಹಚ್ಚಿ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದೆ.

ಮರ ಪ್ರಾಧಿಕಾರ ರಚನೆ ಮಾಡಲು ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿ ಸಲ್ಲಿಕೆಯಾಗಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಪೀಠ, ರಾಜ್ಯದ ಎಲ್ಲ ಸ್ಥಳೀಯ ಸಂಸ್ಥೆಗಳಲ್ಲಿ ಮರ ಪ್ರಾಧಿಕಾರ ರಚಿಸುವಂತೆ ಸೂಚಿಸಿ ನಿರ್ದೇಶನ ನೀಡಿದೆ.

ಮಳೆಗಾಲದಲ್ಲಿ ವಿದ್ಯುತ್ ಅನಾಹುತ ತಪ್ಪಿಸಲು ಸೆಸ್ಕ್ ಸನ್ನದ್ಧಗೊಂಡಿದ್ದು, ಸಾರ್ವಜನಿಕರು ಮಳೆಗಾಲದಲ್ಲಿ ಕೆಲವು ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಪಾಲಿಸುವಂತೆ ಮನವಿ ಮಾಡಿದೆ.

ಭೋವಿ ಅಭಿವೃದ್ಧಿ ನಿಗಮದಲ್ಲಿನ ಬಹುಕೋಟಿ ಹಗರಣಕ್ಕೆ ಸಂಬಂಧಿಸಿದಂತೆ ನಿಗಮದ ಮಾಜಿ ನಿರ್ದೇಶಕಿಯನ್ನು ಇಡಿ ಏಳು ದಿನಗಳ ಕಾಲ ತನ್ನ ಕಸ್ಟಡಿಗೆ ಪಡೆದಿದೆ.

ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಹಾಗೂ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ವಿರುದ್ಧ ಪ್ರಧಾನಿ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ ಎಂದು ಸಿಎಂ ಕಿಡಿಕಾರಿದ್ದಾರೆ.

# ಕಣಿಲೆ ದೋಸೆ



**ಬೇಕಾಗುವ ಸಾಮಗ್ರಿಗಳು :**

ದೊಸೆ ಅಕ್ಕಿ – 1 ಕಪ್
ಒಣಮೆಣಸು – 5-6
ಕಣಿಲೆ – ಅರ್ಧ ಕಪ್
ತೆಂಗಿನ ತುರಿ – 1 ಕಪ್
ಎಣ್ಣೆ – 2 ಚಮಚ,
ಹುಣಸೆ ಹುಳಿ – ಸ್ವಲ್ಪ,
ಉಪ್ಪು – ರುಚಿಗೆ ತಕ್ಕಷ್ಟು

**ಮಾಡುವ ವಿಧಾನ :**

ಮೊದಲಿಗೆ ದೋಸೆ ಅಕ್ಕಿಯನ್ನು 2ರಿಂದ 3 ಗಂಟೆ ನೀರಲ್ಲಿ ನೆನೆಸಿ ನಂತರ ನೀರು ಬಸಿದು, ಅದಕ್ಕೆ ಒಣಮೆಣಸು, ಹುಣಸೆ ಹುಳಿ, ತೆಂಗಿನ ತುರಿ ಸೇರಿಸಿ ರುಬ್ಬಬೇಕು. ನಂತರ (ಕಣಿಲೆಯನ್ನು ಕತ್ತರಿಸಿದ ನಂತರ ಮೂರು ದಿನ ನೀರು ಬದಲಾಯಿಸುವುದು ಮರೆಯದಿರಿ) ಕಣಿಲೆ ಚೂರು, ಉಪ್ಪು ಸೇರಿಸಿ ಮತ್ತೊಮ್ಮೆ ನುಣ್ಣಗೆ ರುಬ್ಬಿಕೊಳ್ಳಬೇಕು. ನಂತರ ತವಾವನ್ನು ಒಲೆಯ ಮೇಲಿಟ್ಟು ಕಾದ ಮೇಲೆ ಎಣ್ಣೆ ಹಾಕಿ ತೆಳ್ಳಗಿನ ದೋಸೆ ಹೊಯ್ದಿದರೆ ರುಚಿಕರವಾದ ಮತ್ತು ಆರೋಗ್ಯಕರವಾದ ಕಣಿಲೆ ದೋಸೆ ಸವಿಯಲು ಸಿದ್ಧ.

# ಮಾಲ್ಡೀವ್ಸ್‌ಗೆ ಇಸ್ರೇಲಿ ಪ್ರಜೆಗಳ ಆಗಮನ ನಿಷೇಧ




ಮಾಲ್ಡೀವ್ಸ್: ಇಸ್ರೇಲಿ ಪ್ರಜೆಗಳು ತನ್ನ ದೇಶಕ್ಕೆ ಪ್ರವೇಶಿಸದಂತೆ ಮಾಲ್ಡೀವ್ಸ್ ಸರ್ಕಾರ ಆದೇಶ ಹೊರಡಿಸಿದೆ. ಇಸ್ರೇಲಿ ಪಾಸ್ ಪೋರ್ಟ್ ಹೊಂದಿರುವ ವ್ಯಕ್ತಿಗಳು ಮಾಲ್ಡೀವ್ಸ್‌ಗೆ ಪ್ರವೇಶಿಸುವುದನ್ನು ನಿಷೇಧಿಸುವ ವಲಸೆ ಕಾಯ್ದೆಯ ಮೂರನೇ ತಿದ್ದುಪಡಿಗೆ ಮಾಲ್ಡೀವ್ಸ್ ಸರ್ಕಾರ ಅನುಮೋದನೆ ನೀಡಿದೆ. ಮಾಲ್ಡೀವ್ಸ್ ವಲಸೆ ಕಾಯ್ದೆಗೆ (ಕಾನೂನು ಸಂಖ್ಯೆ 01/2007) ಮೂರನೇ ತಿದ್ದುಪಡಿಯನ್ನು 2025ರ ಏಪ್ರಿಲ್ 15ರಂದು ನಡೆದ 20ನೇ ಅಧಿವೇಶನದ ವರ್ಷದ ಮೊದಲ ಕಲಾಪದ ದಿನದಂದು ಪೀಪಲ್ಸ್ ಮಜ್ಲಿಸ್ ಅಂಗೀಕರಿಸಿದ ನಂತರ ಮಾಲ್ಡೀವ್ಸ್ ಅಧ್ಯಕ್ಷ ಮೊಹಮ್ಮದ್ ಮುಯಿಝು ಅದನ್ನು ಅನುಮೋದಿಸಿದ್ದಾರೆ.

# ವಿಶ್ವ ಆರ್ಥಿಕ ಹಿಂಜರಿತದ ಸುಳಿವು




ವಾಷಿಂಗ್ಟನ್: ಕಾರು ತಯಾರಕರು ತಮ್ಮ ಪೂರೈಕೆ ಸರಪಳಿಯನ್ನು ಸರಿ ಹೊಂದಿಸಲು ಸಮಯ ಬೇಕಾಗಬಹುದು ಎಂದು ಹೇಳಿದ್ದರು. ಈ ಹಿನ್ನೆಲೆಯಲ್ಲಿ ಈ ವಲಯದ ಮೇಲೆ ವಿಧಿಸಿದ ಸುಂಕಗಳಿಂದ ತಾತ್ಕಾಲಿಕವಾಗಿ ವಿನಾಯಿತಿ ನೀಡಬಹುದು ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಕೆಲವು ಕಾರು ಕಂಪನಿಗಳಿಗೆ ಸಹಾಯ ಮಾಡಲು ನಾನು ಏನನ್ನಾದರೂ ಮಾಡಬೇಕು ಎಂದುಕೊಂಡಿದ್ದೇನೆ ಎಂದು ಟ್ರಂಪ್ ಓವಲ್ ಕಚೇರಿಯಲ್ಲಿ ಸೇರಿದ್ದ ಸುದ್ದಿಗಾರರಿಗೆ ತಿಳಿಸಿದ್ದಾರೆ. ಕೆನಡಾ, ಮೆಕ್ಸಿಕೊ ಮತ್ತು ಇತರ ಸ್ಥಳಗಳಿಂದ ಉತ್ಪಾದನೆ ಸ್ಥಳಾಂತರಿಸಲು ವಾಹನ ತಯಾರಕರಿಗೆ ಸಮಯ ಬೇಕಾಗಬಹುದು ಎಂದು ಟ್ರಂಪ್ ಅಭಿಪ್ರಾಯಪಟ್ಟಿದ್ದಾರೆ.

# ಸಿಂಗಾಪುರದ ಸಂಸತ್ ವಿಸರ್ಜನೆ, ಮೇ3ಕ್ಕೆ ಚುನಾವಣೆ



ಸಿಂಗಾಪುರ: ದಕ್ಷಿಣ ಏಷ್ಯಾದ ಸಿರಿವಂತ ಮತ್ತು ಸುಸಜ್ಜಿತ ನಗರಗಳಿಗೆ ಹೆಸರುವಾಸಿಯಾದ ಸಿಂಗಾಪುರ ಸಾರ್ವತ್ರಿಕ ಚುನಾವಣೆಗೆ ಸಜ್ಜಾಗಿದೆ. ಹಾಲಿ ಸಂಸತ್ತನ್ನು ವಿಸರ್ಜಿಸಲಾಗಿದ್ದು, ಮುಂದಿನ ತಿಂಗಳು ಮೇ 3ರಂದು ಸಾರ್ವತ್ರಿಕ ಚುನಾವಣೆ ನಡೆಯಲಿದೆ. ವಿಶೇಷವೆಂದರೆ, ಈ ಬಾರಿ ಭಾರತೀಯ ಮೂಲದವರೂ ಚುನಾವಣೆಯಲ್ಲಿ ಸ್ಪರ್ಧಿಸಲಿದ್ದಾರೆ. ಪ್ರಧಾನಿ ಲಾರೆನ್ಸ್ ವಾಂಗ್ ಅವರ ಸಲಹೆಯ ಮೇರೆಗೆ ಅಧ್ಯಕ್ಷ ಥಾರ್ಮನ್ ಷಣ್ಮುಗಂ ಅವರು ಸಂಸತ್ ವಿಸರ್ಜಿಸಿ ಆದೇಶಿಸಿದರು. ಇದರ ಬೆನ್ನಲ್ಲೇ, ಚುನಾವಣಾ ಆಯೋಗ ಸಾರ್ವತ್ರಿಕ ಚುನಾವಣೆಗೆ ಮುಹೂರ್ತ ನಿಗದಿಪಡಿಸಿತು.

# ಮೆಹುಲ್ ಚೋಕ್ಸಿ ಬಂಧನ



ಬೆಲ್ಜಿಯಂ: ಭಾರತೀಯ ತನಿಖಾ ಸಂಸ್ಥೆಗಳ ಕೋರಿಕೆಯ ಮೇರೆಗೆ ತಲೆಮರೆಸಿಕೊಂಡಿದ್ದ ವಜ್ರ ವ್ಯಾಪಾರಿ ಮೆಹುಲ್ ಚೋಕ್ಸಿಯನ್ನು ಬಂಧಿಸಲಾಗಿದೆ ಎಂದು ಬೆಲ್ಜಿಯಂ ಫೆಡರಲ್ ಪಬ್ಲಿಕ್ ಸರ್ವಿಸ್ (ಎಫ್‌ಪಿಎಸ್) ದೃಢಪಡಿಸಿದೆ. ಮೆಹುಲ್ ಚೋಕ್ಸಿಯನ್ನು ಏಪ್ರಿಲ್ 12 ರಂದು ಬಂಧಿಸಸಲಾಗಿದ್ದು, ಭಾರತೀಯ ಕೇಂದ್ರ ತನಿಖಾ ದಳ ಹಾಗೂ ಜಾರಿ ನಿರ್ದೇಶನಾಲಯ ಈಗಾಗಲೇ ಆತನನ್ನು ಬೆಲ್ಜಿಯನಿಂದ ಹಸ್ತಾಂತರಿಸುವಂತೆ ಮನವಿ ಸಲ್ಲಿಸಿರುವುದಾಗಿಯೂ ಎಫ್‌ಪಿಎಸ್ ಬಹಿರಂಗಪಡಿಸಿದೆ. ಮೆಹುಲ್ ಚೋಕ್ಸಿ ಅವರನ್ನು ಏಪ್ರಿಲ್ 12 ರಂದು ಬಂಧಿಸಿರುವುದಾಗಿ ಬೆಲ್ಜಿಯಂ ಫೆಡರಲ್ ಪಬ್ಲಿಕ್ ಸರ್ವಿಸ್ ದೃಢಪಡಿಸಬಹುದು.

# ಅಂಬೇಡ್ಕರ್‌ಗಾಗಿ ಅಧಿಕೃತ ದಿನ ಘೋಷಿಸಿದ ನ್ಯೂಯಾರ್ಕ್ !



ನ್ಯೂಯಾರ್ಕ್: ನ್ಯೂಯಾರ್ಕ್ ನಗರವು ಅಧಿಕೃತವಾಗಿ ಏಪ್ರಿಲ್ 14 ಅನ್ನು "ಡಾ. ಭೀಮ ರಾವ್ ರಾಮ್‌ಜಿ ಅಂಬೇಡ್ಕರ್ ದಿನ" ಎಂದು ಘೋಷಣೆ ಮಾಡಿದೆ. ನ್ಯೂಯಾರ್ಕ್ ನಗರದ ಮೇಯರ್ ಎರಿಕ್ ಆಡಮ್ಸ್ ಅಧಿಕೃತ ಘೋಷನೆಗೆ ಸಹಿ ಹಾಕಿದರು. ಜಾಗತಿಕವಾಗಿ ಮಾನವ ಹಕ್ಕುಗಳು ಹಾಗೂ ಸಾಮಾಜಿಕ ನ್ಯಾಯದ ಪ್ರವರ್ತಕ ಎಂದು ಪೂಜಿಸಲ್ಪಡುವ ಡಾ.ಬಿ.ಅಂಬೇಡ್ಕರ್ ಅವರ 134ನೇ ಜಯಂತಿಯಂದು ಈ ಮಹತ್ವದ ನಿರ್ಧಾರದ ಮೂಲಕ ಭಾರತ ಸಂವಿಧಾನ ಶಿಲ್ಪಿಗೆ ನ್ಯೂಯಾರ್ಕ್ ನಗರ ಗೌರವ ಸಲ್ಲಿಸಿದೆ.

# ಸತತ 14ನೇ ವರ್ಷ ಜಪಾನ್ ಜನಸಂಖ್ಯೆ ಇಳಿಮುಖ



ಜಪಾನ್: ಜಪಾನ್ ದೇಶದ ಜನಸಂಖ್ಯೆ ಸತತ 14ನೇ ವರ್ಷ ಇಳಿಕೆಯಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ದೇಶದ ಜನಸಂಖ್ಯೆ 5,50,000ರಷ್ಟು ಕಡಿಮೆಯಾಗಿದೆ ಎಂದು ಜಪಾನ್‌ನ ಆಂತರಿಕ ವ್ಯವಹಾರ ಮತ್ತು ಸಂವಹನ ಸಚಿವಾಲಯದ ಅಂಕಿ ಅಂಶಗಳು ಸೋಮವಾರ ತಿಳಿಸಿವೆ. 2024ರ ಅಕ್ಟೋಬರ್ 1ರ ವೇಳೆಗೆ ವಿದೇಶಿ ನಿವಾಸಿಗಳು ಸೇರಿದಂತೆ ಜಪಾನ್‌ನ ಒಟ್ಟು ಜನಸಂಖ್ಯೆ 123.802 ಮಿಲಿಯನ್ (ಸುಮಾರು 12.3 ಕೋಟಿ) ಆಗಿದೆ ಎಂದು ಜಪಾನ್‌ನ ಆಂತರಿಕ ವ್ಯವಹಾರ ಮತ್ತು ಸಂವಹನ ಸಚಿವಾಲಯದ ಅಂಕಿ ಅಂಶಗಳು ಸೋಮವಾರ ತಿಳಿಸಿವೆ. ಜಪಾನ್‌ನ 47 ಪ್ರಾಂತ್ಯಗಳ ಪೈಕಿ 45ರಲ್ಲಿ ಜನಸಂಖ್ಯೆ ಕುಸಿತವಾಗಿದೆ.

# ಹೌತಿ ಉಗ್ರರಿಂದ ಇಸ್ರೇಲ್ ಮೇಲೆ ಕ್ಷಿಪಣಿ ದಾಳಿ



ಇಸ್ರೇಲ್: ವಾರದ ರಜೆಯ ಮೂಡ್ ನಲ್ಲಿದ್ದ ಇಸ್ರೇಲಿಗಳ ಮೇಲೆ ಭಾನುವಾರ ಮಧ್ಯಾಹ್ನ ಹೌತಿ ಬಂಡುಕೋರರು ಯೆಮೆನ್‌ನಲ್ಲಿರುವ ತಮ್ಮ ನೆಲೆಗಳಿಂದ ಇಸ್ರೇಲ್‌ನ ಮೇಲೆ ಕ್ಷಿಪಣಿ ದಾಳಿ ನಡೆಸಿದ್ದಾರೆ. ಹೌತಿ ಬಂಡುಕೋರರು ಹಾರಿದ ಎರಡೂ ಕ್ಷಿಪಣಿಳನ್ನು ಇಸ್ರೇಲ್ ರಕ್ಷಣಾ ಪಡೆ IDF ಹೊಡೆದುರುಳಿಸಿದೆ. ಮತ್ತೊಂದು ಕಡೆ ಯೆಮೆನ್ ಮೇಲೆ ಅಮೆರಿಕ ನಡೆಸಿದ ದಾಳಿಯಲ್ಲಿ 5 ಮಂದಿ ಸಾವನ್ನಪ್ಪಿದ್ದಾರೆ, ಡಜನ್‌ಗಟ್ಟಲೆ ಜನ ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ. ಭಾನುವಾರ ಸಂಜೆ ಯೆಮೆನ್ ನಲ್ಲಿ ಇರಾನ್ ಬೆಂಬಲಿತ ಹೌತಿಗಳು ಇಸ್ರೇಲ್ ಮೇಲೆ ಹಾರಿಸಿದ ಬ್ಯಾಲಿಸ್ಟಿಕ್ ಕ್ಷಿಪಣಿಯನ್ನು ವಾಯು ರಕ್ಷಣಾ ಪಡೆಗಳು ತಡೆದವು ಎಂದು ಇಸ್ರೇಲ್ ನ ಮಿಲಿಟರಿ ತಿಳಿಸಿದೆ.

# ಅಲ್ಕರಾಜ್‌ಗೆ ಸಿಂಗಲ್ಸ್ ಕಿರೀಟ



ಮಾಂಟೆ ಕಾರ್ಲೊ : ಆರಂಭಿಕ ಹಿನ್ನಡೆಯಿಂದ ಚೇತರಿಸಿಕೊಂಡ ಸ್ಪೇನ್‌ನ ಕಾರ್ಲೋಸ್ ಅಲ್ಕರಾಜ್ ಅವರು ಮಾಂಟೆ ಕಾರ್ಲೊ ಮಾಸ್ಟರ್ಸ್ ಟೆನಿಸ್ ಟೂರ್ನಿಯಲ್ಲಿ ಪುರುಷರ ಸಿಂಗಲ್ಸ್ ಕಿರೀಟ ಮುಡಿಗೇರಿಸಿಕೊಂಡರು. ಫೈನಲ್ ಹಣಾಹಣಿಯಲ್ಲಿ ಎರಡನೇ ಶ್ರೇಯಾಂಕದ ಅಲ್ಕರಾಜ್ 3-6, 6-1, 6-0ರಿಂದ ಇಟಲಿಯ ಲೊರೆಂರ್ಝೊ ಮುಸೆಟ್ಟಿ ಅವರನ್ನು ಮಣಿಸಿ ಇಲ್ಲಿ ಮೊದಲ ಬಾರಿ ಚಾಂಪಿಯನ್ ಆದರು.

# ಇಂಡಿಯನ್ ಸೂಪರ್ ಲೀಗ್ ಕಿರೀಟ ಗೆದ್ದ ಸೂಪರ್ ಜೈಂಟ್




ಕೋಲ್ಕತ್ತ: ಕೊನೆಯ ಹಂತದಲ್ಲಿ ಜೇಮಿ ಮ್ಯಾಕ್ಲರೆನ್ ಗಳಿಸಿದ ಗೋಲಿನ ನೆರವಿನಿಂದ ಆತಿಥೇಯ ಮೋಹನ್ ಬಾಗನ್ ಸೂಪರ್ ಜೈಂಟ್ಸ್ ತಂಡವು ಇಂಡಿಯನ್ ಸೂಪರ್ ಲೀಗ್ ಫೈನಲ್‌ನಲ್ಲಿ 2-1 ಗೋಲುಗಳಿಂದ ಬೆಂಗಳೂರು ಫುಟ್‌ಬಾಲ್ ಕ್ಲಬ್ ತಂಡವನ್ನು ಮಣಿಸಿ ಕಿರೀಟವನ್ನು ಮುಡಿಗೇರಿಸಿಕೊಂಡಿತು.

# ಮುಷ್ಕರ ತೀವ್ರಗೊಳಿಸಲು ಲಾರಿ ಮಾಲೀಕರ ಸಂಘ ನಿರ್ಧಾರ



ಬೆಂಗಳೂರು: ಇಂಧನ ದರ ಏರಿಕೆ, ಟೋಲ್ ಶುಲ್ಕ ಹೆಚ್ಚಳ ವಿರೋಧಿಸಿ ಲಾರಿ ಮಾಲೀಕರ ಸಂಘ ಕರೆ ನೀಡಿರುವ ಅನಿರ್ದಿಷ್ಟಾವಧಿ ಮುಷ್ಕರ ಮುಂದುವರೆದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಡೆಸಿದ ಸಂಧಾನ ಸಭೆ ವಿಫಲವಾದ ಬಳಿಕ, ಅನಿರ್ದಿಷ್ಟಾವಧಿ ಮುಷ್ಕರ ಮುಂದುವರೆಸುವುದಾಗಿ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಜಿ.ಆರ್.ಷಣ್ಮುಖಪ್ಪ ತಿಳಿಸಿದ್ದರು. ಈ ಹಿನ್ನೆಲೆಯಲ್ಲಿ ಮುಷ್ಕರ ಮುಂದುವರೆದಿದ್ದು, ರೈತರು, ವರ್ತಕರು ಹಾಗೂ ವಿವಿಧ ಉದ್ಯಮಗಳು ಸಂಕಷ್ಟಕ್ಕೀಡಾಗುವಂತಾಗಿದೆ. ಅಗತ್ಯ ವಸ್ತುಗಳ ಲಭ್ಯತೆ, ಇಂಧನ ಪೂರೈಕೆ ಕೊರತೆ ಉಂಟಾಗುವ ಆತಂಕ ಎದುರಾಗಿದೆ.

# ದಾಖಲೆಯ ಸದಸ್ಯರು ಅಗ್ನಿಹೋತ್ರದಲ್ಲಿ ಭಾಗಿ !



ಧಾರವಾಡ: ಯುನಿವರ್ಸಲ್ ನಾಲೆಡ್ಜ್ ಟ್ರಸ್ಟ್ ಪ್ರೇರಣೆಯಿಂದ ಗ್ರಾಮ ವಿಕಾಸ ಸಂಸ್ಥೆ ಆಯೋಜಿಸಿದ್ದ ಅಗ್ನಿಹೋತ್ರ ಕಾರ್ಯಕ್ರಮ ವಿಶ್ವ ದಾಖಲೆ ನಿರ್ಮಾಣ ಮಾಡಿತು. ಮನಸೂರಿನ ಹೊರವಲಯದ ಜಮೀನಿನಲ್ಲಿ ಕರ್ನಾಟಕ ಅಗ್ನಿಹೋತ್ರ ಸ್ಪೆಕ್ಟಾಕ್ಯುಲರ್ ಕಾರ್ಯಕ್ರಮದಲ್ಲಿ 11,111 ಕುಟುಂಬಗಳ ಸದಸ್ಯರು ಸೂರ್ಯೋಸ್ತದ ಸಮಯಕ್ಕೆ ಅಗ್ನಿಹೋತ್ರದಲ್ಲಿ ಪಾಲ್ಗೊಂಡು ದಾಖಲೆ ನಿರ್ಮಿಸಿದರು. ನೋಬೆಲ್ ವರ್ಲ್ಡ್ ರೆಕಾರ್ಡ್ ತಂಡದ ನಾಲ್ವರು ಸದಸ್ಯರು ದಾಖಲೆಯನ್ನು ಘೋಷಿಸಿದರು. ಗ್ರಾಮ ವಿಕಾಸ ಸೊಸೈಟಿಯ ಅಧ್ಯಕ್ಷ ಜಗದೀಶ ಶೇಖರ ನಾಯಿಕ ನೇತೃತ್ವದಲ್ಲಿ ಅಗ್ನಿಹೋತ್ರ ಕಾರ್ಯಕ್ರಮ ನಡೆಯಿತು.

# ರೇರಾ ರಿಜಿಸ್ಟ್ರಾರ್ ಅರ್ಜಿ ವಿಚಾರಣೆ ಅರ್ಹತೆ ನಿರ್ಧರಿಸಲು ಸಾಧ್ಯವಿಲ್ಲ – ಹೈಕೋರ್ಟ್

ಬೆಂಗಳೂರು: ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ದಾಖಲಾಗುವ ಅರ್ಜಿಗಳ ವಿಚಾರಣೆಗೆ ಅರ್ಹವೆಂದು ರಿಜಿಸ್ಟ್ರಾರ್ ಅವರು ನಿರ್ಧರಿಸುವುದಕ್ಕೆ ಸಾಧ್ಯವಿಲ್ಲ. ಪ್ರಾಧಿಕಾರದ ಸದಸ್ಯರು ಮಾತ್ರ ನಿರ್ಧರಿಸಬಹುದಾಗಿದೆ ಎಂದು ಹೈಕೋರ್ಟ್ ತಿಳಿಸಿದೆ. ರಿಯಲ್ ಎಸ್ಟೇಟ್ ಡೆವಲಪರ್ ವಿರುದ್ಧದ ದೂರನ್ನು ತಿರಸ್ಕರಿಸಿ ರೇರಾ ರಿಜಿಸ್ಟ್ರಾರ್ ಅವರು ಇ-ಮೇಲ್ ಮೂಲಕ ತಿಳಿಸಿದ್ದ ಆದೇಶವನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಪೀಠ ರೇರಾದ ರಿಜಿಸ್ಟ್ರಾರ್ ಅವರಿಗೆ ಅರ್ಜಿಯನ್ನು ತಿರಸ್ಕರಿಸುವ ಮತ್ತು ಅರ್ಜಿ ವಿಚಾರಣೆಗೆ ಅರ್ಹವಿಲ್ಲ ಎಂದು ಆದೇಶಿಸುವುದಕ್ಕೆ ಅಧಿಕಾರವಿಲ್ಲ ಎಂದು ಪೀಠ ಹೇಳಿದೆ.



# ರಾಜ್ಯದಲ್ಲಿ ಪ್ರತ್ಯೇಕ ಸೈಬರ್ ಕಮಾಂಡ್ ಘಟಕ ಸ್ಥಾಪನೆ




ಬೆಂಗಳೂರು: ರಾಜ್ಯದಲ್ಲಿ ಅಧಿಕವಾಗುತ್ತಿರುವ ಸೈಬರ್ ಅಪರಾಧಗಳನ್ನು ತಡೆಗಟ್ಟಲು ಪ್ರತ್ಯೇಕ ಸೈಬರ್ ಅಪರಾಧ ಕಮಾಂಡ್ ಘಟಕ ಸ್ಥಾಪಿಸಲಾಗಿದ್ದು, ಡಿಜಿಪಿ ಸೈಬರ್ ಕಮಾಂಡ್ ಅವರು ಒಳಾಡಳಿತ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗೆ ವರದಿ ಮಾಡಿಕೊಳ್ಳುವಂತೆ ಆದೇಶದಲ್ಲಿ ಉಲ್ಲೇಖಿಸಿದೆ. ತಂತ್ರಜ್ಞಾನದ ಅತಿಯಾದ ಬಳಕೆ ಹಾಗೂ ಅವಲಂಬನೆಯಿಂದ ಅತಿಹೆಚ್ಚು ಸೈಬರ್ ಅಪರಾಧ ಪ್ರಕರಣಗಳು ದಾಖಲಾಗುತ್ತಿವೆ. ಹಳೆಯ ವೃತ್ತಿಪರ ಅಪರಾಧಗಳಾದ ಡಕಾಯಿತಿ, ದರೋಡೆ ಹಾಗೂ ಇತರೆ ಭೌತಿಕ ಕಳ್ಳತನಗಳನ್ನು ಹಿಂದಿಕ್ಕಿ ಅತಿಹೆಚ್ಚು ಸೈಬರ್ ಅಪರಾಧ ಪ್ರಕರಣಗಳು ವರದಿ ಆಗುತ್ತಿವೆ.

# ಒಂದನೇ ತರಗತಿಗೆ ದಾಖಾಲಾಗಲು ವಯೋಮಿತಿ ಇಳಿಕೆ




ಬೆಂಗಳೂರು: ಒಂದನೇ ತರಗತಿಗೆ ದಾಖಲಾಗಲು ಮಗುವಿಗೆ ಕಡ್ಡಾಯವಾಗಿ 6 ವರ್ಷ ಪೂರ್ಣಗೊಂಡಿರಬೇಕೆಂಬ ನಿಯಮವನ್ನು ಸಡಿಲಿಸಿ, ಇದೊಂದು ಬಾರಿಗೆ 5 ವರ್ಷ 5 ತಿಂಗಳಿಗೆ ಇಳಿಸಲಾಗಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದರು. 3 ವರ್ಷ ಅಂಗನವಾಡಿ ಶಿಕ್ಷಣ ಪೂರೈಸಿರುವ ಹಾಗೂ 5 ವರ್ಷ 5 ತಿಂಗಳು ವಯಸ್ಸು ತುಂಬಿರುವ ಮಗು ಒಂದನೇ ತರಗತಿಗೆ ದಾಖಲಾಗಲು ಅರ್ಹನಾಗಿರುತ್ತದೆ ಎಂದು ತಿಳಿಸಿದರು. ಒಂದನೇ ತರಗತಿಯ ದಾಖಲಾತಿಗೆ ವಯೋಮಿತಿಯ ಸಡಿಲಿಕೆ ಈ ವರ್ಷಕ್ಕೆ ಮಾತ್ರ ಅನ್ವಯವಾಗುತ್ತದೆ ಹಾಗೂ ಮುಂದಿನ ವರ್ಷದಿಂದ ಇದು ಮೊದಲಿನಂತೆ 6 ವರ್ಷವೇ ಆಗಿರುತ್ತದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಸ್ಪಷ್ಟಪಡಿಸಿದರು.

# ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ವರದಿ ಜಾರಿ ಮಾಡಬೇಕು !



ಬೆಂಗಳೂರು : ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ವರದಿಯನ್ನು ಜಾರಿ ಮಾಡಲೇಬೇಕೆಂದು ಹಿಂದುಳಿದ ವರ್ಗದ ಕಾಂಗ್ರೆಸ್ ನಾಯಕರು ಒಕ್ಕೊರಲಿನಿಂದ ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು. ರಾಜ್ಯ ಒಕ್ಕಲಿಗರ ಸಂಘ ವರದಿಗೆ ವಿರೋಧ ವ್ಯಕ್ತಪಡಿಸಿದ ಬೆನ್ನಲ್ಲೇ ಹಿಂದುಳಿದ ವರ್ಗದ ಕಾಂಗ್ರೆಸ್ ನಾಯಕರು ವರದಿ ಬಗ್ಗೆ ಸಮರ್ಥನೆ ಮಾಡಿಕೊಂಡಿದ್ದಾರೆ. ಯಾವುದೇ ಗೊಂದಲಗಳು ಆಗಬಾರದು, ರಾಜ್ಯದ ಜನರಿಗೆ ಒಳ್ಳೆಯದಾಗಬೇಕು. ಹಾಗಾಗಿ, ಸಾಮಾಜಿಕ, ಶೈಕ್ಷಣಿಕ ಸಮೀಕ್ಷಾ ವರದಿಯನ್ನು ಕೂಡಲೇ ಜಾರಿಗೆ ತರಬೇಕೆಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು ಮನವಿ ಮಾಡಿದರು.

# ರಮೇಶ್ ಜಾರಕಿಹೊಳಿ ವಿರುದ್ಧ ಆರೋಪಪಟ್ಟಿ ಸಲ್ಲಿಕೆ

ಬೆಂಗಳೂರು: ಕರ್ನಾಟಕ ಸಹಕಾರಿ ಅಫೆಕ್ಸ್ ಬ್ಯಾಂಕ್‌ನಿಂದ 439ಕೋಟಿ ರೂ. ಸಾಲ ಪಡೆದು ಷರತ್ತುಗಳನ್ನು ಉಲ್ಲಂಘಿಸಿದ ಆರೋಪದಲ್ಲಿ ಬಿಜೆಪಿ ಶಾಸಕ ಮತ್ತು ಮಾಜಿ ಸಚಿವ ರಮೇಶ್ ಜಾರಕಿಹೊಳಿ ವಿರುದ್ಧ ನ್ಯಾಯಾಲಯಕ್ಕೆ ಆರೋಪ ಪಟ್ಟಿ ಸಲ್ಲಿಸಲು ಸಿಐಡಿಗೆ ಹೈಕೋರ್ಟ್ ಅನುಮತಿ ನೀಡಿದೆ. ಸಿಐಡಿ ಪೊಲೀಸರು ನಡೆಸಿದ ತನಿಖೆಗೆ ಅರ್ಜಿದಾರರು ಸಹಕರಿಸಿದ್ದು, ತನಿಖೆ ಪೂರ್ಣಗೊಂಡಿದೆ. ಆರೋಪಪಟ್ಟಿ ಸಲ್ಲಿಕೆಗೆ ಸಿದ್ಧವಾಗಿದ್ದು, ವಿಶೇಷ ನ್ಯಾಯಾಲಯಕ್ಕೆ ಸಲ್ಲಿಸಬಹುದಾಗಿದ್ದು ಆರೋಪ ಪಟ್ಟಿ ಕುರಿತು ಮುಂದಿನ ಆದೇಶದ ವರೆಗೂ ಯಾವುದೇ ಕ್ರಮಕ್ಕೆ ಮುಂದಾಗುವಂತಿಲ್ಲ ಎಂದು ಪೀಠ ತಿಳಿಸಿದೆ.



# ಇಡೀ ಹಳ್ಳಿ ವಕ್ಫ್ ಆಸ್ತಿ : ಜಿಲ್ಲಾಧಿಕಾರಿಗೆ ಮನವಿ




ತಮಿಳುನಾಡು: ವಕ್ಫ್ ಬೋರ್ಡ್‌ನ ನಿಯಮಗಳಿಗೆ ಕೇಂದ್ರ ಸರ್ಕಾರ ಅಂಕುಶ ಹಾಕಲು ವಕ್ಫ್ (ತಿದ್ದುಪಡಿ) ಕಾಯ್ದೆ ಜಾರಿಗೆ ತಂದಿದ್ದು, ಕೇಂದ್ರ ವಿರುದ್ಧ ಹೋರಾಟ ನಡೆಯುತ್ತಿದೆ. ಈ ಮಧ್ಯೆ, ತಮಿಳುನಾಡಿನ ಇಡೀ ಹಳ್ಳಿಯನ್ನು ತನ್ನದು ಎಂದು ಘೋಷಿಸಿಲು ಕೋರಿ ವಕ್ಫ್ ಮಂಡಳಿಯು ಅಲ್ಲಿನ ಜಿಲ್ಲಾಧಿಕಾರಿಗೆ ಮನವಿ ಮಾಡಿ ಅರ್ಜಿ ಸಲ್ಲಿಸಿದೆ. ವೆಲ್ಲೂರು ಜಿಲ್ಲೆಯ ವಿರಿನಿಚಿಪುರಂ ಬಳಿಯ ಕಾಟುಕೊಳ್ಳೈ ಗ್ರಾಮವು ತನ್ನ ಆಸ್ತಿ ಎಂದು ವಕ್ಫ್ ಬೋರ್ಡ್ ವಾದಿಸಿದೆ. ಇಲ್ಲಿ ವಾಸವಾಗಿರುವ ಜನರು ಮಾಸಿಕ ತಮ್ಮ ಭೂಮಿಯನ್ನು ಬಳಸುತ್ತಿರುವ ಕಾರಣ, ಬಾಡಿಗೆ ಪಾವತಿಸಬೇಕು. ಇಲ್ಲವಾದಲ್ಲಿ ಖಾಲಿ ಮಾಡಿಸಬೇಕು ಎಂದು ಅರ್ಜಿಯಲ್ಲಿ ಕೋರಲಾಗಿದೆ.

# ಕಾಂಗ್ರೆಸ್‌ನ 'ಮುಸ್ಲಿಮರ ನಕಲಿ ಓಲೈಕೆ ನೀತಿ'ಯನ್ನು ಟೀಕಿಸಿದ ಪ್ರಧಾನಿ



ಹರಿಯಾಣ : ಕಾಂಗ್ರೆಸ್‌ಗೆ ನಿಜವಾಗಿಯೂ ಮುಸ್ಲಿಮರ ಬಗ್ಗೆ ಸಹಾನುಭೂತಿ ಇದ್ದರೆ, ಪಕ್ಷದ ಅಧ್ಯಕ್ಷರನ್ನಾಗಿ ಆ ಸಮುದಾಯದ ನಾಯಕನನ್ನು ನೇಮಿಸಲಿ ಮತ್ತು ಚುನಾವಣೆಗಳಲ್ಲಿ ಶೇಕಡಾ 50ರಷ್ಟು ಟಿಕೆಟ್‌ಗಳನ್ನು ಸಮುದಾಯದ ಅಭ್ಯರ್ಥಿಗಳಿಗೇ ನೀಡಬೇಕು ಎಂದು ಪ್ರಧಾನಿ ಮೋದಿ ಸವಾಲು ಹಾಕಿದರು. ಕಾಂಗ್ರೆಸ್ ಎಂದಿಗೂ, ಯಾರಿಗೂ ಪ್ರಯೋಜನವಾಗದ 'ಮಧ್ಯಂತರ ನೀತಿ'ಯನ್ನು ಅನುಸರಿಸುತ್ತದೆ. ಪಕ್ಷವು ಚುನಾವಣೆಗಳಲ್ಲಿ ಗೆದ್ದ ಬಳಿಕ ಮತ್ತು ಅದಕ್ಕೂ ಮೊದಲಿನ ನಡವಳಿಕೆಯು ಒಂದೇ ಆಗಿರುವುದಿಲ್ಲ, 2013ರಲ್ಲಿ ವಕ್ಫ್ ಕಾನೂನಿನಲ್ಲಿ ಕಾಂಗ್ರೆಸ್ ಮಾಡಿದ ಬದಲಾವಣೆಗಳನ್ನು ಪ್ರಸ್ತಾಪಿಸಿ ವಾಗ್ದಾಳಿ ನಡೆಸಿದರು.

# ಹಿಂಸಾಚಾರದಿಂದ ತತ್ತರಿಸಿದ ಹಿಂದುಗಳು ನದಿ ದಾಟಿ ಪಲಾಯನ



ಕೋಲ್ಕತಾ: ಪಶ್ಚಿಮ ಬಂಗಾಳದ ಮುರ್ಷಿದಾಬಾದ್ ಜಿಲ್ಲೆಯಲ್ಲಿ ನಡೆದ ಕೋಮು ಹಿಂಸಾಚಾರದಿಂದ ಬಾಧಿತರಾದ ನೂರಾರು ಜನ ಭಾಗೀರಥಿ ನದಿಯನ್ನು ದಾಟಿ ಪಕ್ಕದ ಮಾಲ್ಡಾದಲ್ಲಿ ಆಶ್ರಯ ಪಡೆದಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮುರ್ಷಿದಾಬಾದ್‌ನಿಂದ ಬಂದು ಆಶ್ರಯ ಪಡೆದಿರುವ ಕುಟುಂಬಗಳಿಗೆ ಸ್ಥಳೀಯಾಡಳಿತವು ವಸತಿ ಮತ್ತು ಆಹಾರದ ವ್ಯವಸ್ಥೆ ಮಾಡಿದೆ ಹಾಗೂ ಶಾಲೆಗಳಲ್ಲಿ ಅವರಿಗೆ ಆಶ್ರಯ ನೀಡಲಾಗಿದೆ. ಸುತಿ, ಧುಲಿಯನ್, ಜಂಗಿಪುರ ಮತ್ತು ಶಂಶೇರ್ ಗಂಜ್ ಸೇರಿದಂತೆ ಮುಸ್ಲಿಂ ಬಹುಸಂಖ್ಯಾತ ಮುರ್ಷಿದಾಬಾದ್ ಪ್ರದೇಶಗಳಲ್ಲಿ ಹಿಂಸಾತ್ಮಕ ಪ್ರತಿಭಟನೆಗಳು ನಡೆಯುತ್ತಿವೆ.

# ರಾಜ್ಯಪಾಲರ ಅಂಕಿತವಿಲ್ಲದೆ 10 ಮಸೂದೆಗಳು ಕಾಯ್ದೆಯಾಗಿ ಜಾರಿ !

ತಮಿಳುನಾಡು : ತಮಿಳುನಾಡು ರಾಜ್ಯಪಾಲರು ತಡೆಹಿಡಿದಿದ್ದ 10 ಮಸೂದೆಗಳು ಅಂಕಿತ ಬೀಳದಿದ್ದರೂ, ಕಾಯ್ದೆಯಾಗಿ ಬಂದಿವೆ. ಇದಕ್ಕೆ ಕಾರಣ ಸುಪ್ರೀಂಕೋರ್ಟ್ ನೀಡಿದ ಮಹತ್ವದ ತೀರ್ಪು. ಮೂರು ತಿಂಗಳಿಗೂ ಅಧಿಕ ಕಾಲ ಯಾವುದೇ ಮಸೂದೆಗಳನ್ನು ರಾಜ್ಯಪಾಲರು ಅಥವಾ ರಾಷ್ಟ್ರಪತಿಗಳು ತಡೆಹಿಡಿಯುವಂತಿಲ್ಲ ಎಂದು ಸರ್ವೋಚ್ಚ ನ್ಯಾಯಾಲಯ ಹೇಳಿದೆ. ರಾಜ್ಯಪಾಲರಿಗೆ ಸಮಯದ ಗಡುವು ನೀಡಿದ ಕಾರಣ ಮತ್ತು ತೀರ್ಪಿನ ಮಾಹಿತಿ ಕೋರ್ಟ್‌ನ ವೆಬ್‌ಸೈಟ್‌ನಲ್ಲಿ ಪ್ರಕಟವಾದ ಬೆನ್ನಲ್ಲೇ, ತಡೆದಿದ್ದ ಎಲ್ಲ ಮಸೂದೆಗಳು ಕಾಯ್ದೆಯಾಗಿ ಜಾರಿಗೆ ಬಂದಿವೆ ಎಂದು ತಮಿಳುನಾಡು ಸರ್ಕಾರ ಅಧಿಸೂಚನೆ ಹೊರಡಿಸಿದೆ.



# ಇವಿಎಂಗಳು ಇಂಟರ್‌ನೆಟ್, ಬ್ಲೂಟೂತ್‌ನೊಂದಿಗೆ ಸಂಪರ್ಕ ಹೊಂದಿಲ್ಲ




ಜಾರ್ಖಂಡ್ : ವಿದ್ಯುತ್‌ಚಾಲಿತ ಮತಯಂತ್ರಗಳನ್ನ (ಇವಿಎಂ) ಟ್ಯಾಂಪರಿಂಗ್ ಮಾಡುವ ಬಗ್ಗೆ ಇದ್ದ ಅನುಮಾನದ ಚುನಾವಣಾ ಆಯೋಗ ಮತ್ತೊಮ್ಮೆ ಸ್ಪಷ್ಟನೆ ನೀಡಿದೆ. ಇವಿಎಂಗಳನ್ನು ಹ್ಯಾಕ್ ಮತ್ತು ಟ್ಯಾಂಪರಿಂಗ್ ಮಾಡಲು ಬರುವುದಿಲ್ಲ. ಅವುಗಳು ಇಂಟರ್‌ನೆಟ್, ಬ್ಲೂಟೂತ್‌ನೊಂದಿಗೆ ಸಂಪರ್ಕ ಹೊಂದಿಲ್ಲ ಎಂದು ಹೇಳಿದೆ. ಆಯೋಗದ ಮುಖ್ಯ ಆಯುಕ್ತ ಜ್ಞಾನೇಶ್ ಕುಮಾರ್ ಇವಿಎಂಗಳು ಸಂಪೂರ್ಣ ಭದ್ರತೆಯಿಂದ ಕೂಡಿವೆ. ಅವುಗಳನ್ನು ಹ್ಯಾಕ್ ಮಾಡಲು ಸಾಧ್ಯವಿಲ್ಲ ಎಂದು ಅವರು ತಿಳಿಸಿದರು.



# ಕರಾವಳಿ ತರಂಗಿಣಿ ಕಲಾ ತರಂಗಿಣಿ



## ಪಾಂಚಜನ್ಯ ಮೊಳಗಿಸಿ 'ಯುದ್ಧ ಕಾಂಡ' ಟ್ರೇಲರ್ ಬಿಡುಗಡೆ ಮಾಡಿದ ಕ್ರೇಜಿಸ್ಟಾರ್

ಶ್ರೀಕೃಷ್ಣ ಆರ್ಟ್ಸ್ & ಕ್ರಿಯೇಷನ್ಸ್ ಲಾಂಛನದಲ್ಲಿ ಅಜೇಯ್ ರಾವ್ ನಿರ್ಮಿಸಿ, ನಾಯಕನಾಗಿ ನಟಿಸಿರುವ "ಯುದ್ಧಕಾಂಡ" ಚಿತ್ರದ ಟ್ರೇಲರ್ ಅನ್ನು ಕ್ರೇಜಿಸ್ಟಾರ್ ರವಿಚಂದ್ರನ್ ಬಿಡುಗಡೆ ಮಾಡಿದರು. ಪಾಂಚಜನ್ಯ ಮೊಳಗಿಸಿ ಚಾಲನೆ ನೀಡಿದರು. ನಂತರ ಅತಿಥಿಗಳಾಗಿ ಆಗಮಿಸಿದ್ದ ರವಿಚಂದ್ರನ್ ಹಾಗೂ ಚಿತ್ರತಂಡದ ಸದಸ್ಯರು ಮಾತನಾಡಿದರು. ನಾನು ಬರುವಾಗ ಅಜೇಯ್ ರಾವ್ ಅವರ ಒಂದಿಷ್ಟು ಸಂದರ್ಶನಗಳನ್ನು ನೋಡಿಕೊಂಡು ಬಂದೆ. ಕೆಲವು ಸಂದರ್ಶನಗಳಲ್ಲಿ ಸಾಲ ಮಾಡಿದ್ದೇನೆ ಎಂದು ಅಜೇಯ್ ಹಲವು ಬಾರಿ ಹೇಳಿಕೊಂಡಿದ್ದಾರೆ. ಅದನ್ನು ಕೇಳಿ ನನಗೆ ನನ್ನ ಸಾಲದ ನೆನಪಾಯಿತು. ಇಲ್ಲಿ ಸಾಲ ತೀರಿಸುವ ತಾಕತ್ತು ಬೇಕು. ನಾನು ಕೋಟಿಗಟ್ಟಲೆ ಹಾಕಿ ಸಿನಿಮಾ ಮಾಡಿದವನು. ನನಗೆ ದುಡ್ಡಿನ ಬೆಲೆ ಆಗಲೂ ಗೊತ್ತಿಲ್ಲ. ಈಗಲೂ ಗೊತ್ತಿಲ್ಲ. ನನಗೆ 100 ಡ್ಯಾನ್ಸರ್ಸ್ ಬೇಕು, 100 ಫೈಟರ್ಸ್ ಬೇಕು ಎಂದು ಹೇಳಿಬಿಡುತ್ತಿದೆ. ಅಪ್ಪ ಎಲ್ಲಿಂದ ಹಣ ತರುತ್ತಿದ್ದರು ಅಂತ ನನಗೆ ಗೊತ್ತಿಲ್ಲ. ಒಂದು ದಿವಸ ಅವರು ಇಲ್ಲದಾಗ ಅದರ ಗೊತ್ತಾಯಿತು. ದುಡ್ಡಿಲ್ಲದಿದ್ದರೂ ಇಲ್ಲಿ ಕನಸು ಮುಖ್ಯ. ಎಷ್ಟು ದುಡ್ಡಿದೆಯೋ, ಅಷ್ಟರಲ್ಲಿ ಸಿನಿಮಾ ಮಾಡುವುದನ್ನು ಕಲಿಯಬೇಕು. ಇಲ್ಲಿ ಕಂಟೆಂಟ್ ಮುಖ್ಯ. ಏನು ಹೇಳುತ್ತಿದ್ದೀವಿ ಅನ್ನೋದು ಮುಖ್ಯ. ನಿಮ್ಮ ಚಿತ್ರತಂಡ ನೋಡಿದರೆ, ನಿಮ್ಮಲ್ಲಿ ಶ್ರದ್ಧೆ ಕಾಣುತ್ತಿದೆ. ನಿಮ್ಮ ತಂಡದಲ್ಲಿ ಒಂದು ತೃಪ್ತಿ ಮತ್ತು ಆತ್ಮವಿಶ್ವಾಸವಿದೆ. ನೀವು ಇಷ್ಟೆಲ್ಲಾ ಮಾಡಿ ಸಿನಿಮಾ ಮಾಡಿದ್ದೀರಾ. ನಾನು ಪ್ರೇಕ್ಷಕನಾಗಿ ಸಿನಿಮಾ ನೋಡುತ್ತೇನೆ. ಈಗಲೇ ಐದು ಗೋಲ್ಡ್ ಕ್ಲಾಸ್ ಟಿಕೆಟ್ ತೆಗೆದುಕೊಳ್ಳುತ್ತೇನೆ. ಸಿನಿಮಾ ನೋಡಿ ಫೋನ್ ಮಾಡುತ್ತೇನೆ ಎಂದರು ಕ್ರೇಜಿಸ್ಟಾರ್ ರವಿಚಂದ್ರನ್. ರವಿಚಂದ್ರನ್ ನಮ್ಮ ತಂದೆ, ಅಣ್ಣನ ಸ್ಥಾನದಲ್ಲಿದ್ದಾರೆ. ನಾನು 'ಕೃಷ್ಣನ ಲೀಲಾ' ಚಿತ್ರ ಮಾಡಿದಾಗ, ಆ ಚಿತ್ರದ ಕಲೆಕ್ಷನ್ ಇಳಿಯುತ್ತಿತ್ತು. ರವಿಚಂದ್ರನ್ ಅವರು ತಾವಾಗಿ ಬಂದು ಸಿನಿಮಾ ನೋಡಿ, ನಮ್ಮನ್ನ ಮನೆಗೆ ಕರೆದು ಒಂದಿಷ್ಟು ವಿಚಾರಗಳನ್ನು ಹೇಳಿದರು. ಸಿನಿಮಾ ಬಗ್ಗೆ ನಮಗೆ ಗೊತ್ತಿಲ್ಲದ ಒಂದಿಷ್ಟು ವಿಚಾರಗಳನ್ನು ಹೇಳಿದರು. ಆ ನಂತರ ಕಲೆಕ್ಷನ್ ಕ್ರಮೇಣ ಹೆಚ್ಚಾಯಿತು. ನಾನು 'ಯುದ್ಧಕಾಂಡ' ಮಾಡುವಾಗ ಮೊದಲು ಹೋಗಿ ಅವರ ಬಳಿ ಶೀರ್ಷಿಕೆ ಕೇಳಿದೆ. ಅವರು ಆಶೀರ್ವಾದ ಮಾಡಿ ಕಳಿಸಿದರು ಎಂದರು.



## ಒರಟ ಶ್ರೀ ನಿರ್ದೇಶನದ 'ಕೋರ' ಏಪ್ರಿಲ್ 18ರಂದು ತೆರೆಗೆ

ರತ್ನಮ್ಮ ಮೂವೀಸ್ ಲಾಂಛನದಲ್ಲಿ ಪಿ. ಮೂರ್ತಿ ನಿರ್ಮಿಸಿರುವ, ಒರಟ ಶ್ರೀ ನಿರ್ದೇಶನದ ಹಾಗೂ ರಿಯಾಲಿಟಿ ಶೋ ಮೂಲಕ ನಾಡಿನ ಜನರ ಗಮನ ಸೆಳೆದಿದ್ದ ಸುನಾಮಿ ಕಿಟ್ಟಿ ನಾಯಕನಾಗಿ ನಟಿಸಿರುವ "ಕೋರ" ಚಿತ್ರದ ಪ್ರೀ ರಿಲೀಸ್ ಇವೆಂಟ್ ಇತ್ತೀಚೆಗೆ ಅದ್ದೂರಿಯಾಗಿ ನೆರವೇರಿತು. "ಒರಟ" ಪ್ರಶಾಂತ್, "ಬಿಗ್ ಬಾಸ್" ಖ್ಯಾತಿಯ ತನಿಷಾ ಕುಪ್ಪಂಡ, ರಜತ್, ಸಲಗ ಸೂರಿ, ಸಂಜಯ್ ಗೌಡ, ಎ.ಕೆ.ಮೂರ್ತಿ, ರಮೇಶ್ ಮುಂತಾದವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಏಪ್ರಿಲ್ 18ರಂದು ತೆರೆ ಕಾಣುತ್ತಿರುವ ಈ ಚಿತ್ರಕ್ಕೆ ಶುಭ ಕೋರಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ಕೊರಗಜ್ಜನ ಆಶೀರ್ವಾದದಿಂದ ನಮ್ಮ ತಾಯಿಯವರ ಹೆಸರಿನಲ್ಲಿ ರತ್ನಮ್ಮ ಮೂವೀಸ್ ಮೂಲಕ ಈ ಚಿತ್ರವನ್ನು ನಿರ್ಮಾಣ ಮಾಡಿದ್ದೇನೆ. ನಿರ್ದೇಶಕ ಶ್ರೀ ಹಾಗೂ ಇಡೀ ತಂಡದ ಶ್ರಮದಿಂದ ಈ ಚಿತ್ರ ತುಂಬಾ ಚೆನ್ನಾಗಿ ಬಂದಿದೆ. ಫ್ಯಾಮಿಲಿ ಸೆಂಟಿಮೆಂಟ್, ಆಕ್ಷನ್, ಥ್ರಿಲ್ಲರ್ ಹೀಗೆ ಹಲವು ಜಾನರ್‌ಗಳ ಚಿತ್ರಗಳು ಸಾಕಷ್ಟು ಬಂದಿದೆ. ಆದರೆ ನಮ್ಮ "ಕೋರ" ವಿಭಿನ್ನ ಕಥಾಹಂದರ ಹೊಂದಿರುವ ಚಿತ್ರ. ಕಾಡಿನಲ್ಲೇ ನಡೆಯುವ ಕಥೆ. ಕೊರಗಜ್ಜನ ಭಕ್ತನಾದ ನನಗೆ ಈ ಚಿತ್ರದ ಚಿತ್ರೀಕರಣ ಸಮಯದಲ್ಲಿ ಸಾಕಷ್ಟು ಪವಾಡಗಳಾಗಿದೆ. ಒಟ್ಟಿನಲ್ಲಿ ಪ್ರೇಕ್ಷಕರು ಕೊಟ್ಟ ದುಡ್ಡಿಗೆ ಮೋಸ ಮಾಡದ ಚಿತ್ರವಿದು. ನಾನು ಸಹ ಈ ಚಿತ್ರದ ಪ್ರಮುಖ ಪಾತ್ರದಲ್ಲಿ ನಟಿಸಿದ್ದೇನೆ. ವಿತರಕರಾದ ಜಯಣ್ಣ ಹಾಗೂ ಚಂದನ್ ಸುರೇಶ್ ಅವರ ಸಹಕಾರದೊಂದಿಗೆ ಏಪ್ರಿಲ್ 18ರಂದು ಕನ್ನಡದಲ್ಲಿ ನಮ್ಮ ಚಿತ್ರ ಬಿಡುಗಡೆಯಾಗಲಿದೆ. ನಂತರದ ವಾರಗಳಲ್ಲಿ ತೆಲುಗು ಹಾಗೂ ತಮಿಳು ಭಾಷೆಗಳಲ್ಲೂ ರಿಲೀಸ್ ಆಗಲಿದೆ ನಮ್ಮ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು ನಿರ್ಮಾಪಕ ಪಿ.ಮೂರ್ತಿ. ಈ ಚಿತ್ರವನ್ನು ನಿರ್ದೇಶಿಸಲು ಅವಕಾಶ ಮಾಡಿಕೊಟ್ಟ ನಿರ್ಮಾಪಕರಿಗೆ, ತಂದೆ ತಾಯಿಗೆ ಹಾಗೂ ಚಿತ್ರಕ್ಕೆ ಸಹಕಾರ ನೀಡಿದ ಇಡೀ ತಂಡಕ್ಕೆ ಧನ್ಯವಾದ ತಿಳಿಸಿ ಮಾತನಾಡಿದ ನಿರ್ದೇಶಕ ಶ್ರೀ, "ಕೋರ" ನಲವತ್ತು ವರ್ಷಗಳ ಹಿಂದಿನ ಕಥೆ. ಕಾಡಿನಲ್ಲೇ ಹೆಚ್ಚು ನಡೆಯುವ ಕಥೆಯೂ ಹೌದು. ಅವರು ಈ ಚಿತ್ರದಲ್ಲಿ ಖಡಕ್ ವಿಲನ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಈ ಚಿತ್ರದಿಂದ ಕನ್ನಡ ಚಿತ್ರರಂಗಕ್ಕೆ ಉತ್ತಮ ಖಳನಟ ದೊರಕುವುದು ಖಂಡಿತ ಎಂದು ನಿರ್ದೇಶಕ ಶ್ರೀ ತಿಳಿಸಿದರು. ರಿಯಾಲಿಟಿ ಶೋ ಗಳಲ್ಲಿ ಭಾಗವಹಿಸುತ್ತಿದ್ದ ನನ್ನನ್ನು ಈ ಚಿತ್ರದ ಮೂಲಕ ನಾಯಕನನ್ನಾಗಿ ಮಾಡಿದ ನಿರ್ಮಾಪಕ ಪಿ.ಮೂರ್ತಿ ಅವರಿಗೆ ಹಾಗೂ ನನಗೆ ಅಭಿನಯ ಹೇಳಿಕೊಟ್ಟು ಚಿತ್ರದಲ್ಲಿ ನಟಿಸಲು ಸಿದ್ಧತೆ ಮಾಡಿಸಿದ ನಿರ್ದೇಶಕ ಶ್ರೀ ಅವರಿಗೆ ಧನ್ಯವಾದ ಎಂದು ನಾಯಕ ಸುನಾಮಿ ಕಿಟ್ಟಿ ಹೇಳಿದರು.



## 'ಫೈರ್ ಫ್ಲೈ' ಸಿನಿಮಾದ ಟ್ರೇಲರ್ ರಿಲೀಸ್

ಮಗಳ ಸಿನಿಮಾದಲ್ಲಿ ಶಿವಣ್ಣ ಪಿಜ್ಜಾ ಡೆಲಿವರಿ ಬಾಯ್.. ಹೇಗಿದೆ ಫೈರ್ ಫ್ಲೈ ಟ್ರೇಲರ್? ನಿವೇದಿತಾ ಶಿವರಾಜ್‌ಕುಮಾರ್ ನಿರ್ಮಾಣದ ಫೈರ್ ಫ್ಲೈ ಸಿನಿಮಾ ಟೀಸರ್ ಹಾಗೂ ಹಾಡುಗಳ ಮೂಲಕ ಈಗಾಗಲೇ ಇಂಡಸ್ಟ್ರೀಯಲ್ಲಿ ಬಜ್ ಕ್ರಿಯೇಟ್ ಮಾಡಿದೆ. ಅಣ್ಣಾವ್ರ ಜನ್ಮದಿನ ಅಂದ್ರೆ ಇದೇ ತಿಂಗಳ 24ಕ್ಕೆ ತೆರೆಗೆ ಬರ್ತಿದೆ. ಈಗಾಗಲೇ ಪ್ರಚಾರ ಕಾರ್ಯ ಭರದಿಂದ ಸಾಗಿದೆ. ಅದರ ಭಾಗವಾಗಿ ನಿನ್ನೆ ಶಿವಣ್ಣನ ನಿವಾಸದಲ್ಲಿ ಟ್ರೇಲರ್ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಫೈರ್ ಫ್ಲೈ ಇಡೀ ತಂಡ ಹಾಗೂ ಶಿವಣ್ಣ ದಂಪತಿ ಭಾಗಿಯಾಗಿ ಹೊಸಪ್ರತಿಭೆಗಳ ಕನಸಿಗೆ ಬೆನ್ನುತಟ್ಟಿದ್ದರು. ಟ್ರೇಲರ್ ಬಿಡುಗಡೆ ಬಳಿಕ ಶಿವಣ್ಣ ಮಾತನಾಡಿ, ಮಗಳು ಸಿನಿಮಾ ಮಾಡಿರುವುದು ಬಹಳ ಖುಷಿಯಾಗಿದೆ. ನಾನು ಕಥೆ ಕೇಳಿದೆ ವಿಭಿನ್ನವಾಗಿತ್ತು. ಕೇಳಿದ ತಕ್ಷಣ ಹೃದಯಕ್ಕೆ ಸೇರಿತು. ಸಾಕಷ್ಟು ವಿಷಯಗಳು ಚಿತ್ರದಲ್ಲಿವೆ. ಬರೀ ಫೈಟ್, ಡ್ಯುಯೇಟ್ ಸಾಂಗ್ ಮಾಡಬಹುದು. ಆದರೆ ಫೈರ್ ಫ್ಲೈ ವ್ಯಾಲ್ಯೂ ಸಬ್ಜೆಕ್ಟ್ ಇರುವ ಚಿತ್ರ. ವಂಶಿ ಒಳ್ಳೆ ಕಥೆ ಮಾಡಿದ್ದಾರೆ. ಒಳ್ಳೆ ತಂಡ ಚಿತ್ರಕ್ಕೆ ಕೆಲಸ ಮಾಡಿದೆ. ಚರಣ್ ರಾಜ್ ಸಂಗೀತ ಬಗ್ಗೆ ಮಾತನಾಡುವ ಆಗಿಲ್ಲ. ನಮ್ಮ ಕನ್ನಡದಲ್ಲಿಯೂ ಹೊಸ ತಂಡ ಬರಬೇಕು. ಹೊಸ ಅಲೆ ಬರಬೇಕು ಎಂಬ ಉದ್ದೇಶದಿಂದ ನನ್ನ ಆಸೆ. ಅವರೇ ನಮ್ಮ ಭಾಷೆ, ಸಂಸ್ಕೃತಿಯನ್ನು ಕರೆದುಕೊಂಡು ಹೋಗಬೇಕು. ಸಿನಿಮಾ ಹೇಗೆ ಹೋಗುತ್ತದೆ. ಬಿಡುತ್ತದೆ ಅದು ಎರಡನೇ ಯದ್ದು. ಆದರೆ ನಮ್ಮ ಪ್ರಯತ್ನ ಇರಬೇಕು. ನಾನು ಈ ಚಿತ್ರದಲ್ಲಿ ನಟಿಸಿದ್ದೇನೆ. ಹೊಸ ಹುಡುಗರು ನಮ್ಮನ್ನು ಇನ್ನಷ್ಟು ಯಂಗ್ ಆಗಿ ತೋರಿಸಿದ್ದಾರೆ. ಗೀತಾ ಶಿವರಾಜ್‌ಕುಮಾರ್ ಮಾತನಾಡಿ, ಹೊಸ ತಂಡ ಹೊಸ ಪ್ರಯತ್ನ ಮಾಡಿದೆ. ಎಲ್ಲರೂ ಇದಕ್ಕೆ ಪ್ರೋತ್ಸಾಹ ಕೊಡಬೇಕು ಎಂದರು.



## ಎ. ಐ ಚಿತ್ರ 'ಲವ್ ಯು' ಬಿಡುಗಡೆಗೆ ಸೆನ್ಸಾರ್ ಗ್ರೀನ್ ಸಿಗ್ನಲ್

ಜಗತ್ತಿನಲ್ಲಿ ಈಗ ಎಲ್ಲಿ ನೋಡಿದರೂ ಕೃತಕ ಬುದ್ಧಿಮತ್ತೆ (ಎ.ಐ) ಯದ್ದೇ ಮಾತು. ನಿಧಾನವಾಗಿ ಒಂದೊಂದೇ ಕ್ಷೇತ್ರವನ್ನು ಆವರಿಸಿಕೊಂಡು ಬರುತ್ತಿರುವ ಕೃತಕ ಬುದ್ಧಿಮತ್ತೆ (ಎ.ಐ) ಕೆಲ ಸಮಯದ ಹಿಂದೆಯೇ ಚಿತ್ರರಂಗವನ್ನೂ ಸ್ಪರ್ಶಿಸಿದೆ. ಈಗಾಗಲೇ ಸಿನಿಮಾಗಳ ಹಲವು ವಿಭಾಗಗಳಲ್ಲಿ, ಪ್ರೀ-ಪ್ರೊಡಕ್ಷನ್ ಮತ್ತು ಪೋಸ್ಟ್ ಪ್ರೊಡಕ್ಷನ್ ಕೆಲಸಗಳಲ್ಲಿ ಎ.ಐ. ಬಳಕೆ ನಿಧಾನವಾಗಿ ಹೆಚ್ಚಾಗುತ್ತಿದೆ. ಈಗ ಈ ವಿಷಯದಲ್ಲಿ ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿರುವ ಒಂದು ಚಿತ್ರತಂಡ ಸಂಪೂರ್ಣವಾಗಿ ಕೃತಕ ಬುದ್ಧಿಮತ್ತೆ (ಎ.ಐ) ಮೂಲಕವೇ ತಯಾರಾದ 'ಲವ್ ಯು' ಎಂಬ ಹೆಸರಿನ ಮೊದಲ ಸಿನಿಮಾವನ್ನು ತೆರೆಗೆ ತರುವ ತಯಾರಿಯಲ್ಲಿದೆ. 'ಲವ್ ಯು' ಎಂಬ ಹೆಸರಿನ ಈ ಸಿನಿಮಾವನ್ನು ಸಂಪೂರ್ಣವಾಗಿ ಕೃತಕ ಬುದ್ಧಿಮತ್ತೆ (ಎ. ಐ) ಬಳಸಿ ನಿರ್ಮಿಸಲಾಗಿದೆ. ಈಗಾಗಲೇ ಜಗತ್ತಿನ ಅನೇಕ ಚಿತ್ರರಂಗಗಳಲ್ಲಿ, ಸಿನಿಮಾಗಳ ವಿವಿಧ ವಿಭಾಗಗಳಲ್ಲಿ ಎ.ಐ (AI) ತಂತ್ರಜ್ಞಾನವನ್ನು ಬಳಸಲಾಗುತ್ತಿದೆಯಾದರೂ, ಸಂಪೂರ್ಣವಾಗಿ ಎ.ಐ. ಮೂಲಕವೇ ಇಡೀ ಸಿನಿಮಾವನ್ನು ನಿರ್ಮಿಸುವ ಸಾಹಸ ಎಲ್ಲಿಯೂ ನಡೆದಿರಲಿಲ್ಲ. ಆದರೆ ಇದೇ ಮೊದಲ ಬಾರಿಗೆ ಕನ್ನಡದಲ್ಲಿ ಸಂಪೂರ್ಣ ಎ. ಐ (AI) ತಂತ್ರಜ್ಞಾನವನ್ನೇ ಬಳಸಿಕೊಂಡು 'ಲವ್ ಯು' ಸಿನಿಮಾವನ್ನು ತಯಾರಿಸಲಾಗಿದೆ. 'ಈ ಸಿನಿಮಾದ ನಿರ್ದೇಶಕರು, ನಿರ್ಮಾಪಕರನ್ನು ಹೊರತುಪಡಿಸಿದರೆ, ಮತ್ತೆಲ್ಲ ಕೆಲಸಗಳನ್ನೂ ಎ.ಐ (AI) ತಂತ್ರಜ್ಞಾನವೇ ಮಾಡಿರುವುದು ಇದರ ಮೊದಲ ವಿಶೇಷತೆ. ಇದು ವಿಶ್ವದಲ್ಲಿಯೇ ಸಂಪೂರ್ಣ ಎ.ಐ. (AI) ನಿರ್ಮಿತ ಮೊದಲ ಸಿನಿಮಾ' ಎನ್ನುತ್ತಾರೆ ಈ ಸಿನಿಮಾವನ್ನು ನಿರ್ಮಿಸಿ, ನಿರ್ದೇಶಿಸಿರುವ ಎಸ್. ನರಸಿಂಹ ಮೂರ್ತಿ. 'ನಮ್ಮ 'ಲವ್ ಯು' ಸಿನಿಮಾದಲ್ಲಿ ಬರುವ ಪ್ರತಿ ಪಾತ್ರಗಳು, ಅವುಗಳ ಸಂಭಾಷಣೆ, ಸಂಗೀತ ಸಂಯೋಜನೆ, ಛಾಯಾಗ್ರಹಣ, ಸೌಂಡ್ ಡಿಸೈನ್, ಹಿನ್ನೆಲೆಯಲ್ಲಿ ಬರುವ ಸ್ಥಳಗಳು, ಕಲರಿಂಗ್ ಹೀಗೆ ಎಲ್ಲಾ ಕೆಲಸಗಳಿಗೂ ಎ.ಐ ತಂತ್ರಜ್ಞಾನ ಬಳಕೆ ಮಾಡಲಾಗಿದೆ. ನೂತನ್ ಎಂಬ ಎ.ಐ (AI) ಇಂಜಿನಿಯರ್ ತಮ್ಮ ತಾಂತ್ರಿಕ ನಾಯಕತ್ವ ಮತ್ತು ಸುಂದರ್ ರಾಜ್ ಗುಂಡೂರಾವ್ ಯೋಜನೆಯ ನೇತೃತ್ವದಲ್ಲಿ ಈ ಸಿನಿಮಾ ಸೃಜನಶೀಲವಾಗಿ ಮೂಡಿಬಂದಿದೆ' ಎಂಬುದು ಸಿನಿಮಾದ ನಿರ್ದೇಶಕ ಮತ್ತು ನಿರ್ಮಾಪಕ ಎಸ್. ನರಸಿಂಹ ಮೂರ್ತಿ ಮಾತು. ಅಂದಹಾಗೆ, 95 ನಿಮಿಷಗಳ 'ಲವ್ ಯು' ಎ.ಐ (AI) ಸಿನಿಮಾದಲ್ಲಿ ಬರೋಬ್ಬರಿ 12 ಹಾಡುಗಳಿವೆ.



## ವಿಷ್ಣು ಮಂಚು ಕನಸಿನ ಚಿತ್ರಕ್ಕೆ ಯೋಗಿ ಆದಿತ್ಯನಾಥ್ ಬೆಂಬಲ

ತೆಲುಗಿನ ಖ್ಯಾತ ನಟ ಡಾ. ಮೋಹನ್‌ಬಾಬು, ಹೆಮ್ಮೆಯಿಂದ ನಿರ್ಮಿಸಿರುವ 'ಕಣ್ಣಪ್ಪ' ಚಿತ್ರವು ಏಪ್ರಿಲ್ 25ರಂದು ಬಿಡುಗಡೆಯಾಗಬೇಕಿತ್ತು. ಆದರೆ, ಚಿತ್ರದ ತಾಂತ್ರಿಕ ಕೆಲಸಗಳು ವಿಳಂಬವಾದ್ದರಿಂದ ಚಿತ್ರದ ಬಿಡುಗಡೆಯನ್ನು ಮುಂದೂಡಲಾಗಿತ್ತು. ಇದೀಗ ಚಿತ್ರತಂಡವು ಹೊಸ ಬಿಡುಗಡೆ ದಿನಾಂಕವನ್ನು ಘೋಷಿಸಿದ್ದು, ಚಿತ್ರವು ಜೂನ್ 27ರಂದು ಜಗತ್ತಿನಾದ್ಯಂತ ಪ್ಯಾನ್ ಇಂಡಿಯಾ ಚಿತ್ರವಾಗಿ ತೆಲುಗು, ಕನ್ನಡ, ಹಿಂದಿ, ತಮಿಳು ಮತ್ತು ಮಲಯಾಳಂನಲ್ಲಿ ಏಕಕಾಲಕ್ಕೆ ಬಿಡುಗಡೆಯಾಗುತ್ತಿದೆ. 'ಕಣ್ಣಪ್ಪ' ಚಿತ್ರವು ಡಾ. ಮೋಹನ್ ಬಾಬು ಮತ್ತು ಅವರ ಮಗ ವಿಷ್ಣು ಮಂಚು ಅವರ ಕನಸಿನ ಕೂಸಾಗಿದ್ದು, ಇದೊಂದು ಬರೀ ಚಿತ್ರವಾಗದೆ ಒಂದು ಅಭೂತಪೂರ್ವ ಅನುಭವವಾಗಬೇಕು ಎಂಬ ನಿಟ್ಟಿನಲ್ಲಿ ಹಗಲು ರಾತ್ರಿ ಶ್ರಮಿಸಿದ್ದಾರೆ. ಇದಕ್ಕೆ ಪ್ರತಿಯಾಗಿ ಚಿತ್ರವು ಅದ್ಭುತವಾಗಿ ಮೂಡಿಬಂದಿದ್ದು, ಪ್ರೇಕ್ಷಕರ ನಿರೀಕ್ಷೆಗೆ ತಕ್ಕ ಹಾಗೆ ನಿಲುಕಲಿದೆ ಎಂದು ಚಿತ್ರತಂಡ ನಂಬಿದೆ. ಶುಕ್ರವಾರ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಚಿತ್ರದ ಅಧಿಕೃತ ಬಿಡುಗಡೆ ದಿನಾಂಕದ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಬಿಡುಗಡೆ ದಿನಾಂಕವನ್ನು ಘೋಷಿಸಿದ್ದಾರೆ.



## 45 ಚಿತ್ರದ ಪ್ರಚಾರಕ್ಕೆ ಪ್ರೈವೆಟ್ ಜೆಟ್ನಲ್ಲಿ ಹೊರಟ ಚಿತ್ರತಂಡ

ಕರುನಾಡ ಚಕ್ರವರ್ತಿ ಶಿವರಾಜಕುಮಾರ್, ರಿಯಲ್ ಸ್ಟಾರ್ ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಪ್ರಮುಖಪಾತ್ರದಲ್ಲಿ ನಟಿಸಿರುವ, ಸಂಗೀತ ನಿರ್ದೇಶಕ ಅರ್ಜುನ್‌ಜನ್ಯ ಚೊಚ್ಚಲ ನಿರ್ದೇಶನದ ಹಾಗೂ ಎಂ. ರಮೇಶ್ ರೆಡ್ಡಿ ಅವರು ತಮ್ಮ 'ಸೂರಜ್ ಪ್ರೊಡಕ್ಷನ್' ಬ್ಯಾನರ್‌ನಲ್ಲಿ ಅದ್ದೂರಿಯಾಗಿ ಅಪಾರವೆಚ್ಚದಲ್ಲಿ ನಿರ್ಮಿಸುತ್ತಿರುವ ಕನ್ನಡದ ಬಹುನಿರೀಕ್ಷಿತ ಮಲ್ಟಿಸ್ಟಾರರ್ ಪ್ಯಾನ್ ಇಂಡಿಯಾ "45" ಚಿತ್ರ ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ. ಯುಗಾದಿ ಹಬ್ಬದಂದು ಈ ಚಿತ್ರದ ಟೀಸರ್ ಎಲ್ಲಾ ಭಾಷೆಗಳಲ್ಲೂ ಬಿಡುಗಡೆಯಾಗಿತ್ತು. ಈ ಅದ್ಭುತ ಟೀಸರ್‌ಗೆ ಕನ್ನಡಿಗರು ಮಾತ್ರವಲ್ಲದೆ ಎಲ್ಲಾ ಭಾಷೆಗಳ ಕಲಾಭಿಮಾನಿಗಳು ಫಿದಾ ಆಗಿದ್ದಾರೆ. ಮೆಚ್ಚುಗೆಯ ಮಹಾಪೂರವನ್ನೇ ಹರಿಸುತ್ತಿದ್ದಾರೆ. ಟೀಸರ್ ನಲ್ಲೇ ಮೋಡಿ ಮಾಡಿರುವ ಈ ಚಿತ್ರ ಆಗಸ್ಟ್ 15ರಂದು ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ಟೀಸರ್‌ಗೆ ದೊರಕಿರುವ ಮೆಚ್ಚುಗೆಗೆ ಚಿತ್ರತಂಡ ಸಂತಸಗೊಂಡಿದೆ.



## ಅಂತರಾಷ್ಟ್ರೀಯ ಮಟ್ಟದಲ್ಲಿ ಸದ್ದು ಮಾಡಿರುವ 'ಗ್ರೀನ್' ಸದ್ಯದಲ್ಲೇ ತೆರೆಗೆ

ರಾಜ್ ವಿಜಯ್ ಹಾಗೂ ಬಿ.ಎನ್. ಸ್ವಾಮಿ ನಿರ್ಮಾಣದ ಹಾಗೂ ರಾಜ್ ವಿಜಯ್ ನಿರ್ದೇಶನದ ವಿಭಿನ್ನ ಕಥಾಹಂದರ ಹೊಂದಿರುವ "ಗ್ರೀನ್" ಚಿತ್ರ ತೆರೆಗೆ ಬರಲು ಅಣಿಯಾಗಿದೆ. ಈಗಾಗಲೇ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಚಲನಚಿತ್ರೋತ್ಸವಗಳಲ್ಲಿ ಪ್ರದರ್ಶನಗೊಂಡು ಹಲವು ಪ್ರಶಸ್ತಿಗಳ ಜೊತೆಗೆ ಪ್ರಶಂಸೆಯನ್ನು ಗಳಿಸಿರುವ ಹಾಗೂ ಸೈಕಲಾಜಿಕಲ್ ಮೈಂಡ್ ಬೆಂಡಿಂಗ್ ಕಥಾಹಂದರ ಹೊಂದಿರುವ ಈ ಚಿತ್ರದ ಪ್ರಮುಖ ಪಾತ್ರದಲ್ಲಿ ಗೋಪಾಲಕೃಷ್ಣ ದೇಶಪಾಂಡೆ, ಬಾಲಾಜಿ ಮನೋಹರ್, ಆರ್.ಜೆ.ವಿಕ್ಕಿ, ವಿಶ್ವನಾಥ್ ಮಾಂಡಲಿಕ, ಶಿವ ಮಂಜು, ಡಿಂಪಿ ಫದ್ಯಾ, ಮುರುಡಯ್ಯ, ರಾಮಚಂದ್ರ, ಗಿರೀಶ್ ಅಭಿನಯಿಸಿದ್ದಾರೆ. ಕೆ. ಮಧುಸೂದನ್ ಛಾಯಾಗ್ರಹಣ ಹಾಗೂ ಶಕ್ತಿ ಸ್ಯಾಕ್ ಅವರ ಸಂಗೀತ ನಿರ್ದೇಶನ ಈ ಚಿತ್ರಕ್ಕಿದೆ. ಗ್ರೀನ್ ಒಂದು ಮನೋವೈಜ್ಞಾನಿಕ ಮನಸ್ಸನ್ನು ಬೆರಗುಗೊಳಿಸುವ ಥ್ರಿಲ್ಲರ್ ಚಿತ್ರವಾಗಿದ್ದು, ಇದು ವೀಕ್ಷಕರನ್ನು ಮಾನವ ಮನಸ್ಸಿನ ಆಳಕ್ಕೆ ಕರೆದೊಯ್ಯುತ್ತದೆ. ತನ್ನ ಇಡೀ ಜೀವನವನ್ನೇ ನಿಯಂತ್ರಿಸುತ್ತಿರುವ ತನ್ನೊಳಗಿನ ರಾಕ್ಷಸನಿಂದ ಹೊರಬರಲು ಹೋರಡುವ ನಾಯಕನ ಕಥೆಯೇ ಗ್ರೀನ್.



## ವಿಜಯ್ ಸೇತುಪತಿ-ಪೂರಿ ಜಗನ್ನಾಥ್ ಚಿತ್ರಕ್ಕೆ ಟಬು ಎಂಟ್ರಿ

ತೆಲುಗಿನ ಡ್ಯಾಷಿಂಗ್ ಡೈರೆಕ್ಟರ್ ಪುರಿ ಜಗನ್ನಾಥ್ ಹಾಗೂ ದಕ್ಷಿಣ ಭಾರತದ ಖ್ಯಾತ ನಟ ವಿಜಯ್ ಸೇತುಪತಿ ಕಾಂಬೋದ ಹೊಸ ಚಿತ್ರದ ಬಗ್ಗೆ ಲೇಟೆಸ್ಟ್ ಸುದ್ದಿಯೊಂದು ಸಿಕ್ಕಿದೆ. ಯುಗಾದಿ ಹಬ್ಬಕ್ಕೆ ಈ ಜೋಡಿ ಮೊದಲ ಬಾರಿಗೆ ಕೈ ಜೋಡಿಸಿರುವ ಬಗ್ಗೆ ಮಾಹಿತಿ ನೀಡಿತ್ತು. ಇದೀಗ ಪುರಿ ಜಗನ್ನಾಥ್ ಹೊಸ ಪ್ರಾಜೆಕ್ಟ್ ಬಾಲಿವುಡ್ ಪ್ರತಿಭಾನ್ವಿತ ನಟಿ ಟಬು ಎಂಟ್ರಿ ಕೊಟ್ಟಿದ್ದಾರೆ. ವಿಭಿನ್ನ ಪಾತ್ರಗಳ ಮೂಲಕ ಗಮನಸೆಳೆದ ಟಬು ವಿಜಯ್ ಸೇತುಪತಿ ನಾಯಕನಾಗಿ ನಟಿಸುತ್ತಿರುವ ಈ ಪ್ಯಾನ್ ಇಂಡಿಯಾ ಪ್ರಾಜೆಕ್ಟ್‌ನಲ್ಲಿ ಪ್ರಮುಖ ಪಾತ್ರದಲ್ಲಿ ಅಭಿನಯಿಸುತ್ತಿದ್ದಾರೆ. ತಮ್ಮ ಪಾತ್ರ ಹಾಗೂ ಚಿತ್ರದ ಕಥೆ ಕೇಳಿ ಟಬು ಎಕ್ಸೈಟ್ ಆಗಿದ್ದಾರೆ. ಜೂನ್‌ನಿಂದ ಚಿತ್ರತಂಡ ಶೂಟಿಂಗ್ ಅಖಾಡಕ್ಕೆ ಇಳಿಯುತ್ತಿದೆ. ಈ ಚಿತ್ರದಲ್ಲಿ ವಿಜಯ್ ಸೇತುಪತಿ ಹಿಂದೆಂದೂ ಕಾಣದ ಲುಕ್‌ನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಪುರಿ ಕನೆಕ್ಟ್' ಬ್ಯಾನರ್ ಮೂಲಕ ನಿರ್ಮಾಣ ಮಾಡಲಾಗುವುದು. ಪುರಿ ಜಗನ್ನಾಥ್ ಹಾಗೂ ಚಾರ್ಮಿ ಕೌರ್ ನಿರ್ಮಾಪಕರಾಗಿ ಚಿತ್ರಕ್ಕೆ ಸಾಥ್ ಕೊಡುತ್ತಿದ್ದಾರೆ.



## ಏ.25ರಿಂದ ZEE5ನಲ್ಲಿ 'ಅಯ್ಯನ ಮನೆ'

ಭಾರತೀಯ ಚಿತ್ರರಂಗದ ಒಟಿಟಿ ಫ್ಲಾರ್ಟ್ ಫಾರಂಗಳಲ್ಲೊಂದು ZEE5. ಹಲವು ಸೂಪರ್ ಹಿಟ್ ಸಿನಿಮಾಗಳು ಈ ಒಟಿಟಿ ಫ್ಲಾರ್ಟ್‌ನಲ್ಲಿ ಲಭ್ಯವಿದೆ. ಇದೀಗ ZEE5 ಮತ್ತೊಂದು ಹೊಸ ಸಾಹಸ ಮಾಡಿದ್ದು, ಕನ್ನಡ ಸಿನಿಮಾ ಪ್ರೇಮಿಗಳಿಗಾಗಿ ಮಿನಿ ವೆಬ್ ಸೀರೀಸ್‌ನ್ನು ಪರಿಚಯಿಸಿದೆ. ZEE5ನಿಂದ ಬರ್ತಿರುವ ಮೊದಲ ಕನ್ನಡ ಮಿನಿ ವೆಬ್ ಸೀರೀಸ್‌ನ್ನು ಖ್ಯಾತ ನಿರ್ದೇಶಕ ಹಾಗೂ ಕಲಾವಿದರ ರಮೇಶ್ ಇಂದಿರಾ ನಿರ್ಮಾಣ ಮಾಡಿದ್ದಾರೆ. ಆ ಸೀರೀಸ್‌ಗೆ ಅಯ್ಯನ ಮನೆ ಎಂದು ಟೈಟಲ್ ಇಡಲಾಗಿದೆ. ಪ್ರತಿ ಮನೆಯೂ ಸ್ವರ್ಗವಾಗಿರುವುದಿಲ್ಲ. ಅಲ್ಲಿ ಎಷ್ಟೋ ಮುಚ್ಚಿಟ್ಟ ವಿಷಯಗಳು ಇರುತ್ತವೆ ಅನ್ನೋದನ್ನು ಈ ಮಿನಿ ಸೀರೀಸ್ ಮೂಲಕ ರಮೇಶ್ ಇಂದಿರಾ ಹೇಳಲು ಹೊರಟಿದ್ದಾರೆ. ರಮೇಶ್ ಇಂದಿರಾ ನಿರ್ದೇಶನದಲ್ಲಿ ಮೂಡಿ ಬರ್ತಿರುವ 'ಅಯ್ಯನ ಮನೆ' ವೆಬ್ ಸೀರೀಸ್‌ಗೆ ಶೃತಿ ನಾಯ್ಡು ಪ್ರೊಡಕ್ಷನ್ ನಿರ್ಮಾಣ ಮಾಡಿದೆ. 7 ಎಪಿಸೋಡ್ ಹೊಂದಿರುವ ವೆಬ್ ಸೀರೀಸ್‌ನಲ್ಲಿ ಖುಷಿರವಿ, ಅಕ್ಷಯ್ ನಾಯಕ್, ಮಾನಸಿ ಸುಧೀರ್ ಅಭಿನಯಿಸಿದ್ದಾರೆ.



## ಶಿವಕಾರ್ತಿಕೇಯನ್, ಎಆರ್ ಮುರುಗದಾಸ್ ಜೋಡಿಯ ಮದರಾಸಿ

ಬ್ಲಾಕ್‌ಬಸ್ಟರ್ ಅಮರನ್ ಸಿನಿಮಾ ಬಳಿಕ ಶಿವಕಾರ್ತಿಕೇಯನ್ ಕೈಗೆತ್ತಿಕೊಂಡಿರುವ ಬಹುನಿರೀಕ್ಷಿತ ಪ್ರಾಜೆಕ್ಟ್ ಮದರಾಸಿ. ಹೈ-



ಆಕ್ಟೇನ್ ಆಕ್ಷನ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಈ ಚಿತ್ರದ ಗ್ಲಿಂಪ್ಸ್ ಭಾರೀ ಸದ್ದು ಮಾಡಿವೆ. ಈ ಚಿತ್ರಕ್ಕೆ ಎ.ಆರ್. ಮುರುಗದಾಸ್ ಆಕ್ಷನ್ ಕಟ್ ಹೇಳಿದ್ದು, ಸಪ್ತ ಸಾಗರದಾಚೆ ಎಲ್ಲೋ ನಾಯಕಿ ರುಕ್ಮಿಣಿ ವಸಂತ್ ಶಿವಕಾರ್ತಿಕೇಯನ್‌ಗೆ ಜೋಡಿಯಾಗಿ ಸಾಥ್ ಕೊಟ್ಟಿದ್ದಾರೆ. ಸದ್ಯ ಚಿತ್ರದ ಶೂಟಿಂಗ್ ಭರದಿಂದ ಸಾಗುತ್ತಿದ್ದು, ಇದೀಗ ಚಿತ್ರತಂಡ ಮದರಾಸಿ ಸಿನಿಮಾದ ಬಿಡುಗಡೆ ದಿನಾಂಕ ಘೋಷಣೆ ಮಾಡಿದೆ. ಸೆಪ್ಟೆಂಬರ್ 5, 2025ರಂದು ಮದರಾಸಿ ಸಿನಿಮಾ ತೆರೆಗೆ ಬರ್ತಿದೆ. ಸ್ಪೆಷಲ್ ಪೋಸ್ಟರ್ ಮೂಲಕ ಚಿತ್ರತಂಡ ಬಿಡುಗಡೆ ದಿನಾಂಕ ರಿವೀಲ್ ಮಾಡಿದೆ. ಪೋಸ್ಟರ್‌ನಲ್ಲಿ ಶಿವಕಾರ್ತಿಕೇಯನ್ ಸಖತ್ ರಗಡ್ ಆಗಿ ಕಾಣಿಸಿಕೊಂಡಿದ್ದಾರೆ. ವಿದ್ಯುತ್ ಜಮ್ವಾಲ್ ಖಳನಾಯಕನಾಗಿ ತೊಡೆ ತಟ್ಟಿದ್ದು, ಈ ಹಿಂದೆ ತುಪ್ಪಾಕ್ಕಿ ಚಿತ್ರದಲ್ಲಿ ಅಬ್ಬರಿಸಿದ್ದ ವಿದ್ಯುತ್ ಜಮ್ವಾಲ್ ನಟಿಸುತ್ತಿದ್ದಾರೆ.



ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## ಶೂಟಿಂಗ್ ಅಖಾಡಕ್ಕಿಳಿದ ಬಿಲ್ಲ ರಂಗ ಭಾಷಾ..



ಕಿಚ್ಚ ಸುದೀಪ್ ಅಭಿಮಾನಿಗಳು ಕಾಯ್ತಿದ್ದ ಆ ಕ್ಷಣ ಬಂದೇ ಬಿಟ್ಟಿದೆ. ಬಿಲ್ಲ ರಂಗ ಭಾಷಾ ಚಿತ್ರದ ಚಿತ್ರೀಕರಣಕ್ಕೆ ಕಿಕ್ ಸ್ಟಾರ್ಟ್ ಸಿಕ್ಕಿದೆ. ನಿರ್ದೇಶಕ ಅನೂಪ್ ಭಂಡಾರಿ ಮಾತನಾಡಿ, 20 ದಿನಗಳ ಕಾಲ ಮೊದಲ ಹಂತದ ಚಿತ್ರೀಕರಣ ನಡೆಸುತ್ತೇವೆ. ಚಿತ್ರದ ಪ್ರಮುಖ ಆಕ್ಷನ್ ಚಿತ್ರೀಕರಣ ನಡೆಯಲಿದೆ. ಅದಕ್ಕಾಗಿ ಅದ್ಭುತ ಸೆಟ್ ಕೆಲಸ ನಡೆಯುತ್ತಿತ್ತು. ಅದು ಈಗ ಪೂರ್ಣಗೊಂಡಿದ್ದು ಚಿತ್ರೀಕರಣಕ್ಕೆ ಸಿದ್ಧವಾಗಿದೆ. ಮೊದಲ ಹಂತದ ಚಿತ್ರೀಕರಣ ಮುಗಿಸಿದ ಬಳಿಕ ಬ್ರೇಕ್ ತೆಗೆದುಕೊಂಡು ಮುಂದಿನ ಹಂತದ ಶೂಟಿಂಗ್‌ಗೆ ಸಜ್ಜಾಗುತ್ತೇವೆ ಎಂದು ತಿಳಿಸಿದ್ದಾರೆ. ಟಾಲಿವುಡ್ ಬ್ಲಾಕ್‌ಬಸ್ಟರ್ ಹಿಟ್ ಸಿನಿಮಾ ಹನುಮಾನ್ ನಿರ್ಮಾಪಕರಾದ ನಿರಂಜನ್ ರೆಡ್ಡಿ ಹಾಗೂ ಚೈತನ್ಯ ರೆಡ್ಡಿ ಬಿಲ್ಲ ರಂಗ ಭಾಷಾ ಚಿತ್ರಕ್ಕೆ ತಮ್ಮದೇ ಪ್ರೈಮ್ ಶೋ ಎಂಟರ್‌ಟೈನ್ಮೆಂಟ್ ಬ್ಯಾನರ್‌ನಡಿ ಅದ್ದೂರಿಯಾಗಿ ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ.

## ಶೈಲಜಾ ನಾಗ್–ಬಿ ಸುರೇಶ್ ಪುತ್ರಿ ರಂಗಪ್ರವೇಶ



ನಟನೆ, ನಿರ್ಮಾಣ, ನಿರ್ದೇಶನ, ರಂಗಭೂಮಿ ಹೀಗೆ ಹಲವು ವಿಭಾಗಗಳಲ್ಲಿ ಗುರುತಿಸಿಕೊಂಡಿರುವ ಬಿ ಸುರೇಶ ಮತ್ತು ನಟಿ, ನಿರ್ಮಾಪಕಿ ಶೈಲಜಾ ನಾಗ್ ಅವರ ಪುತ್ರಿ ಚಂದನಾ ಎಸ್ ನಾಗ್ ಈಗ ಭರತನಾಟ್ಯ ರಂಗಪ್ರವೇಶ ಮಾಡಲಿದ್ದಾರೆ. ಸ್ನೇಹಾ ಕಪ್ಪಣ್ಣ ಅವರ ಭ್ರಮರಿ ನಾಟ್ಯಶಾಲೆಯಲ್ಲಿ ಕಲಿಯುತ್ತಿರುವ ಚಂದನಾ ಎಸ್. ನಾಗ್, ಇದೇ ಏಪ್ರಿಲ್ 20ರಂದು ಬೆಂಗಳೂರಿನ ಜೆಸಿ ರಸ್ತೆಯಲ್ಲಿನ ಎಡಿಎ ರಂಗಮಂದಿರದಲ್ಲಿ, ಸಂಜೆ 5:30ಕ್ಕೆ ರಂಗಪ್ರವೇಶ ಮಾಡಲಿದ್ದಾರೆ. ಈ ವಿಶೇಷ ಕಾರ್ಯಕ್ರಮಕ್ಕೆ ನೂಪುರ ಸ್ಕೂಲ್ ಆಫ್ ಭರತನಾಟ್ಯಂನ ನಿರ್ದೇಶಕಿ ಗುರು ಡಾ. ಲಲಿತಾ ಶ್ರೀನಿವಾಸನ್, ಪದ್ಮಶ್ರೀ ಶ್ರೀಮತಿ ಪ್ರತಿಭಾ ಪ್ರಹ್ಲಾದ್, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ಅಧ್ಯಕ್ಷೆ ಗುರು ಶ್ರೀಮತಿ ಶುಭಾ ಧನಂಜಯ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

## 'ಸ್ಪಾರ್ಕ್'ನಲ್ಲಿ ನೆನಪಿರಲಿ ಪ್ರೇಮ್ ಸ್ಪೆಷಲ್ ರೋಲ್


ನೆನಪಿರಲಿ ಪ್ರೇಮ್ ಇತ್ತೀಚೆಗೆ ಪಾತ್ರಗಳ ಆಯ್ಕೆಯಲ್ಲಿ ತೊಡಗಿರುವುದರಿಂದ ವಿಭಿನ್ನವಾಗಿ ಕಾಣಿಸ್ತಾರೆ. ಬರೋ ಎಲ್ಲಾ ಪಾತ್ರಗಳನ್ನೂ ಅವರು ಒಪ್ಪಿಕೊಳ್ಳುವುದಿಲ್ಲ. ಅಳೆದು ತೂಗಿ ಪ್ರೇಕ್ಷಕರಿಗೆ ಇಷ್ಟವಾಗುವ ಸಿನಿಮಾಗಳನ್ನೇ ಮಾಡುತ್ತಾ ಬಂದಿದ್ದಾರೆ. ಈಗ ಪ್ರೇಮ್ ಹೊಸ ಸಿನಿಮಾ ಒಪ್ಪಿಕೊಂಡಿದ್ದಾರೆ. ರಿಯಲ್ ಸ್ಟಾರ್ ಉಪೇಂದ್ರ ಅಣ್ಣನ ಮಗ ನಿರಂಜನ್ ಸುಧೀಂದ್ರ ನಾಯಕನಾಗಿ ನಟಿಸುತ್ತಿರುವ 'ಸ್ಪಾರ್ಕ್'ಚಿತ್ರಕ್ಕೆ ಪ್ರೇಮ್ ಎಂಟ್ರಿ ಕೊಟ್ಟಿದ್ದಾರೆ. 'ಸ್ಪಾರ್ಕ್' ಚಿತ್ರದಲ್ಲಿ ನಿರಂಜನ್ ಹೀರೋ. ಒಂದು ವಿಶಿಷ್ಟ ಪಾತ್ರದಲ್ಲಿ ನೆನಪಿರಲಿ ಪ್ರೇಮ್ ಕಾಣಿಸಿಕೊಳ್ಳುತ್ತಿದ್ದಾರೆ. ನಿರ್ದೇಶಕ ಮಹಾಂತೇಶ್ ಹಂದ್ರಾಳ್ ಸ್ಪೆಷಲ್ ಪಾತ್ರವನ್ನು ಪ್ರೇಮ್‌ಗಾಗಿ ಹೆಣೆದಿದ್ದು, ಪ್ರೇಮ್ ಕೂಡ ಇಷ್ಟಪಟ್ಟು ಚಿತ್ರದಲ್ಲಿ ಅಭಿನಯಿಸಲು ಮುಂದಾಗಿದ್ದಾರೆ. ತಮ್ಮ ಇಷ್ಟು ವರ್ಷದ ಪಯಣದ ಅನುಭವಗಳನ್ನು ಇಟ್ಟುಕೊಂಡು ನಿರ್ದೇಶಕ ಮಹಾಂತೇಶ್ ಹಂದ್ರಾಳ್ ಪಾತ್ರಗಳನ್ನು ವಿಶೇಷವಾಗಿ ರೂಪಿಸಿದ್ದಾರೆ.



## ರಿಲೀಸ್‌ಗೆ ರೆಡಿಯಾದ 'ಎಲ್ಟು ಮುತ್ತಾ'

ಹೈ5 ಸ್ಟುಡಿಯೋಸ್ ನಿರ್ಮಾಣದ ಚೊಚ್ಚಲ ಸಿನಿಮಾ ಎಲ್ಟು ಮುತ್ತಾ ಟೈಟಲ್‌ನಿಂದಲೇ ನಿರೀಕ್ಷೆ ಹೆಚ್ಚಿಸಿದೆ. ಪೋಸ್ಟರ್ ಮೂಲಕ ಗಮನಸೆಳೆದಿದ್ದ ಚಿತ್ರತಂಡ ಇತ್ತೀಚೆಗಷ್ಟೇ ಮಾಧ್ಯಮದರ ಮುಂದೆ ಬಂದಿದ್ದರು. ನಿರ್ಮಾಪಕ ಸತ್ಯ ಶ್ರೀನಿವಾಸನ್ ಮಾತನಾಡಿ, ಹೈ5 ಸ್ಟುಡಿಯೋವನ್ನು ಎರಡು ಉದ್ದೇಶದಿಂದ ಶುರು ಮಾಡಿದ್ದೇವು. ಒಳ್ಳೆ ಸಿನಿಮಾ ಮಾಡಬೇಕು. ಹಾಗೂ ಪ್ರತಿಭಾನ್ವಿತರನ್ನು ಪ್ರೋತ್ಸಾಹಿಸಬೇಕು ಎಂದು ಸ್ಟುಡಿಯೋಸ್ ಪ್ರಾರಂಭಿಸಿದ್ದೇವು. ಮೊದಲು ಎಲ್ಟು ಮುತ್ತಾ ಎಂಬ ಚಿತ್ರ ಮಾಡಿದ್ದೇವೆ. ಈ ಚಿತ್ರದ ಶೂಟಿಂಗ್ ಮುಕ್ತಾಯಗೊಂಡಿದ್ದು, ರಿಲೀಸ್‌ಗೆ ರೆಡಿ ಇದ್ದೇವೆ. 50 ದಿನ ಕೊಡಗು ಹಾಗೂ 2 ದಿನ ಬೆಂಗಳೂರಿನಲ್ಲಿ ಚಿತ್ರೀಕರಣ ಮಾಡಿದ್ದೇವೆ ಎಂದು ಮಾಹಿತಿ ನೀಡಿದರು. ನಿರ್ದೇಶಕರಾದ ರಾ ಸೂರ್ಯ ಮಾತನಾಡಿ, ಎಲ್ಟು ಮುತ್ತಾ ಎರಡು ಪಾತ್ರಗಳ ಸುತ್ತ ನಡೆಯುವ ಕಥೆ ಇದಾಗಿದ್ದು, ಚಿತ್ರ ಚೆನ್ನಾಗಿ ಮೂಡಿ ಬಂದಿದೆ ಎಂದು ತಿಳಿಸಿದರು.









Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212